# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 265 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–05–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 265 | Title- Code: KARKAN 28269 | Chitradurga | Date: 11-05-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮಾದಾರ ಚನ್ನಯ್ಯ ಗುರುಪೀಠಕ್ಕೆ ವಟು ಸ್ವೀಕಾರ 2

ಎಸ್‌ಎಸ್‌ಎಲ್‌ಸಿ ಫಲಿತಾಂಶ; ತಾಲ್ಲೂಕಿನಾದ್ಯಂತ ಶೇ.75.54 ಸಾಧನೆ 3

ಶುದ್ಧ ಕುಡಿವ ನೀರಿನ ಘಟಕಕ್ಕೆ ಕುಟೇವು ನಿವಾಸಿಗಳ ಮನವಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಭಿಮತ

# ನಮ್ಮ ಹೃದಯದಲ್ಲಿ ಬಸವಣ್ಣ ಅರಳಲಿ

» **ಚಿತ್ರದುರ್ಗ**

ಸರ್ಕಾರದ ಆದೇಶದಂತೆ ಎಲ್ಲಾ ಕಚೇರಿಗಳಲ್ಲಿ ಬಸವೇಶ್ವರ ಭಾವಚಿತ್ರವನ್ನು ಅನಾವರಣಗೊಳಿಸಲಾಗಿದೆ. ನಿಜವಾಗಿಯೂ ನಮ್ಮೆಲ್ಲರ ಹೃದಯದಲ್ಲಿ ಜಗಜ್ಯೋತಿ ಬಸವೇಶ್ವರರು ಅನಾವರಣಗೊಳ್ಳಬೇಕು. ಅಂದಾಗ ಮಾತ್ರ ಬಸವೇಶ್ವರರ ತತ್ವಗಳನ್ನು ರೂಢಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸಲು ಸಾಧ್ಯವಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಭಿಮತ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ನಾಡಿನ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಬಸವೇಶ್ವರ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಾವಚಿತ್ರಗಳಿಗೆ ಪುಷ್ಪ ನಮನ ಸಮರ್ಪಿಸಿ ಅವರು ಮಾತನಾಡಿದರು.

ದುಡಿಮೆ ಹಾಗೂ ದಾಸೋಹ ಎಂಬ ಎರಡು ಮಹತ್ವವಾದ ತತ್ವಗಳನ್ನು ಬಸವೇಶ್ವರರು ನಾಡಿಗೆ ಪರಿಚಯಿಸಿದ್ದಾರೆ. ಕಾಯಕದಲ್ಲಿ ಕೈಲಾಸ ಕಂಡವರು ಶಿವಶರಣರು. 12ನೇ ಶತಮಾನ ಅನುಭವ ಮಂಟಪದಲ್ಲಿ ನಿಜವಾದ ಪ್ರಜಾಪ್ರಭುತ್ವದ ಕುರುಹು ಕಾಣಬಹುದು. ಅನುಭವ ಮಂಟಪ ಜಾತಿ ಆಧಾರದ ಮೇಲೆ ರೂಪುಗೊಂಡಿಲ್ಲ. ಎಲ್ಲಾ ಜಾತಿಯ ಮಹನೀಯರು ಅನುಭವ ಮಂಟಪದ ಸದಸ್ಯರಾಗಿದ್ದರು. ಎಲ್ಲಾ ಶಿವಶರಣರು



ಕಾಯಕ ತತ್ವದಲ್ಲಿ ನಂಬಿಕೆಯಿಟ್ಟು, ಒಂದಲ್ಲ ಒಂದು ದುಡಿಮೆಯಲ್ಲಿ ತೊಡಗಿದ್ದರು. ಇದರಿಂದ ಬಂದ ಆದಾಯವನ್ನು ದಾಸೋಹಕ್ಕೆ ಬಳಸಿಕೊಳ್ಳುತ್ತಿದ್ದರು. ಬಿಜ್ಜಳ ರಾಜನ ಕೋಶದ ಮಂತ್ರಿಯಾಗಿ ಬಸವಣ್ಣ ಕೆಲಸ ನಿರ್ವಹಿಸಿದರೂ, ಒಂದು ಬಿಡಿಗಾಸನ್ನು ರಾಜ್ಯದ ಕೋಶದಿಂದ ದಾಸೋಹಕ್ಕೆ ಬಳಸಿಕೊಳ್ಳಲಿಲ್ಲ. ನಿಷ್ಠೆಯಿಂದ ಶಿವಶರಣ ದುಡಿಮೆಯಿಂದಲೇ ದಾಸೋಹ ಕೈಗೊಂಡರು. ಕೋಶದ ಹಣ ಬಳಕೆ ಮಾಡಿದಂತೆ ಆರೋಪ ಬಂದ ತಕ್ಷಣ ತನ್ನ ಸ್ಥಾನವನ್ನು ಬಸವೇಶ್ವರರು ತೊರೆದರು. ನಾವು ದುಡಿಯಬೇಕು, ದುಡಿದಿದ್ದನ್ನು ಸಮಾಜಕ್ಕೆ ಹಂಚಬೇಕು. ಆದರೆ ಇಂದಿನ ಸಮಾಜದಲ್ಲಿ ಸ್ವಾರ್ಥದಿಂದ ನನಗೆ, ನನ್ನ ಕುಟುಂಬಕ್ಕೆ, ಮಕ್ಕಳಿಗೆ, ಮೊಮ್ಮಕ್ಕಳಿಗೆ, ಮರಿ ಮೊಮ್ಮಕ್ಕಳಿಗೆ ಎಂದು ಸಂಪತ್ತನ್ನು ಕೂಡಿಡುವ ಪ್ರವೃತ್ತಿ ಬೆಳೆಯುತ್ತಿದೆ. ಈ ಪರಿಕಲ್ಪನೆಯಿಂದ ಆಚೆ ಬಂದು ಸಮಾಜಮುಖಿಯಾಗಿ ಜೀವನ ನಡೆಸುವುದನ್ನು 12ನೇ ಶತಮಾನದಲ್ಲಿ ಬಸವೇಶ್ವರರು ನಮ್ಮೆಲ್ಲರಿಗೂ ತೋರಿಸಿಕೊಟ್ಟರು. ಇದೇ ಮಾದರಿಯಲ್ಲಿ ನಡೆ–ನುಡಿ ಒಂದಾಗಿ ಬಸವೇಶ್ವರರು ಬಾಳಿದರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಬಸವೇಶ್ವರರು ಸಾಂಸ್ಕೃತಿಕವಾಗಿಯೂ ನಾಡಿನ ಹಿರಿಮೆಯಾಗಿದ್ದಾರೆ. ಬಸವೇಶ್ವರರ ವಚನಗಳು ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಹೊಸ ಅಧ್ಯಾಯ ಬರೆದವು. ಜನ ಸಾಮಾನ್ಯರ ಅಡು ಭಾಷೆಯಲ್ಲಿಯೇ ವಚನಗಳನ್ನು ಬರೆದು ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಕೆಲಸ ಮಾಡಿದರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಓರ್ವ ಗೃಹಿಣಿಯಾಗಿ ಮಹಾಸಾಧ್ವಿತನಕ್ಕೆ ಏರಿದವಳು. ವಿಷಯ ಲಂಪಟ ವೇಮನನ್ನು ಮಹಾಯೋಗಿ ವೇಮನನ್ನಾಗಿ ಮಾಡಿದ್ದು ಹೇಮರೆಡ್ಡಿ ಮಲ್ಲಮ್ಮ. ಅವಳ ಭಕ್ತಿ ಹಾಗೂ ಉದಾರ ಗುಣ ನಮ್ಮೆಲರಿಗೂ ಮಾದರಿಯಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ವೀರಶೈವ ಸಮಾಜದ ಅಧ್ಯಕ್ಷ ತಿಪ್ಪೇಸ್ವಾಮಿ ಮಾತನಾಡಿ, ಬಸವಣ್ಣನವರ ನಡೆ–ನುಡಿ ಪಾಲನೆಯಿಂದ ನಮಗೆ ಯಾವುದೇ ವಿಚಾರದಲ್ಲಿಯೂ ಹಿನ್ನಡೆಯಾಗುವುದಿಲ್ಲ. ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ, ಜಾತಿವ್ಯವಸ್ಥೆಯನ್ನು ತೊಡೆದು ಹಾಕಿದ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿರುವುದು ಸ್ವಾಗತಾರ್ಹ ಎಂದು ಹೇಳಿದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಎಂ.ಶಿವಮೂರ್ತಿ ಮಾತನಾಡಿ, ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿರುವುದರಿಂದ ರಾಜ್ಯದ ಕೆಲವು ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಬಸವಣ್ಣನವರ ಪುತ್ಥಳಿ ಅನಾವರಣ ಮಾಡಲಾಗಿದೆ. ಅದರಂತೆ ನಮ್ಮ ಬಹಳ ವರ್ಷಗಳ ಬೇಡಿಕೆಯಾದ ಬಸವಣ್ಣನವರ ಪುತ್ಥಳಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಸ್ಥಾಪನೆ ಮಾಡುವುದು ಸೂಕ್ತ ಎಂದು ತಿಳಿಸಿದ ಅವರು, ವಿಶ್ವಗುರು ಬಸವಣ್ಣ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಹೇಮರೆಡ್ಡಿ ಮಲ್ಲಮ್ಮ ಸಮಾಜದ ಅಧ್ಯಕ್ಷ ಚಿದಾನಂದಪ್ಪ ಮಾತನಾಡಿ, ಸ್ತ್ರೀ ಕುಲಕ್ಕೆ ಮಾದರಿಯಾಗಿ, ಸಮಾಜದ ಉದ್ಧಾರಕ್ಕಾಗಿ, ಭಕ್ತಿಯ ಸಾಕಾರಮೂರ್ತಿಯಾಗಿ ಹೇಮರೆಡ್ಡಿ ಮಲ್ಲಮ್ಮರವರ ಜೀವನ ಆದರ್ಶಪ್ರಾಯವಾಗಿದೆ.

ಪುಟ 2

## ಫಾಸ್ಟ್ ನ್ಯೂಸ್

### ಚಾಕು ಇರಿತ ಪ್ರಕರಣ: ಮಹಿಳೆ ಸಾವು; ಬಂಧನ

» **ಹೊಸದುರ್ಗ**

ಹಣದ ವಿಚಾರವಾಗಿ ರಸ್ತೆಯಲ್ಲೆ ತನ್ನ ಹೆಂಡತಿ ಮತ್ತು ಅತ್ತೆಗೆ ಚಾಕುವಿನಿಂದ ಇರಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಮಹಿಳೆ ಸಾವನ್ನಪ್ಪಿದ್ದು ಮತ್ತೋರ್ವ ಮಹಿಳೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ ಈ ಪ್ರಕರಣಕ್ಕ ಸಂಬಂಧಿಸಿದಂತೆ ಹೊಸದುರ್ಗ ಪೋಲಿಸರು ಓರ್ವನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಸಾವನ್ನಪ್ಪಿರುವ ಮಹಿಳೆಯನ್ನು ತಾಲೂಕಿನ ಶೀರನಕಟ್ಟೆ ಕೋಡಿಹಟ್ಟಿ ಗ್ರಾಮದ ಸಣ್ಣಕರಿಯಪ್ಪ ಎಂಬುವವರ ಪತ್ನಿ ಕೆಂಚಮ್ಮ(54) ಎಂದು ತಿಳಿದು ಬಂದಿದ್ದು ಬಂಧಿತ ಆರೋಪಿಯನ್ನು ಮೃತ ಕೆಂಚಮ್ಮಳ ಅಳಿಯ (ಮಗಳ ಗಂಡ) ಶೇಷಪ್ಪ(35) ಎಂದು ತಿಳಿದು ಬಂದಿದ್ದು ಶೇಷಪ್ಪನ ಪತ್ನಿ ದಾವಣಗೆರೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಏನಿದು ಪ್ರಕರಣ: ಮೇ 1 ರಂದು ಶೇಷಪ್ಪನ ಹೆಂಡತಿ ಹಾಗು ಹೆಂಡತಿಯ ತಾಯಿ ಇಬ್ಬರೂ ಸಹಾ ಶೀರಕಟ್ಟೆ ಗ್ರಾಮದ ಸಮೀಪ ನಡದುಕೊಂಡು ಹೋಗುತಿದ್ದ ಸಂಧರ್ಬದಲ್ಲಿ ಶೇಷಪ್ಪ ಎಕಾ ಎಕಿ ಬಂದು ಹಣದ ವಿಚಾರಕ್ಕೆ ಗಲಾಟೆ ತೆಗೆದಿದ್ದಾನೆ ಮಾತಿಗೆ ಮಾತು ಬೆಳೆದು ಗಲಾಟೆ ವಿಕೋಪಕ್ಕೆ ಹೋದಾಗ ಶೇಷಪ್ಪ ತನ್ನ ಹೆಂಡತಿ ಹಾಗೂ ಅತ್ತೆ ಕೆಂಚಮ್ಮಳಿಗೆ ಚಾಕುವಿನಿಂದ ಚುಚ್ಚಿ ಪರಾರಿಯಾಗಿದ್ದ ರಕ್ತದ ಮೊಡವಿನಲ್ಲಿ ಬಿದ್ದಿದ್ದ ಇಬ್ಬರನ್ನೂ ಸಹಾ ಕೂಡಲೇ ಹೊಸದುರ್ಗ ಆಸ್ಪತ್ರೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಎಸ್.ಎಸ್.ಆಸ್ಪತ್ರೆಯಲ್ಲಿ ದಾಖಲಿಸಲಾಗಿತ್ತು ಅಲ್ಲಿನ ವೈದ್ಯರು ಮೇ 1 ರಿಂದ ಮೇ 7 ರವರೆಗೂ ಸಹಾ ಚಿಕಿತ್ಸೆ ನೀಡಿ ಕೆಂಚಮ್ಮ ಬದುಕುವುದಿಲ್ಲ ಎಂದು ಹೇಳಿದಾಗಿ ಮೇ 7 ರಂದು ಮತ್ತೆ ಹೊಸದುರ್ಗ ಆಸ್ಪತ್ರೆಯಲ್ಲಿ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೇ 8 ರಂದು ತಡ ರಾತ್ರಿ ಕೆಂಚಮ್ಮ ಮೃತ ಪಟ್ಟಿದ್ದಾರೆ. ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಖಾಸಗಿ ಶಾಲಾ ಶಿಕ್ಷಕಿ ಗೀತಶ್ರೀ ಸಾವಿನ ಪ್ರಕರಣ ಗಂಡ, ಮಾವನ ಬಂಧನ



» **ಹೊಸದುರ್ಗ**

ತನ್ನ ಗಂಡ ಮಾವ ಹಾಗೂ ಅತ್ತೆಯ ಹಿಂಸೆಯನ್ನ ತಾಳಲಾದರೆ ಈ ಮೂವರೂ ಸಹಾ ಸಾಯಲು ಪ್ರಚೋದನೆ ನೀಡಿದ್ದ ಹಿನ್ನೆಲೆಯಲ್ಲಿ ಖಾಸಗಿ ಶಾಲಾ ಶಿಕ್ಷಕಿಯೋರ್ವರು ತನ್ನ ಮನೆಯಲ್ಲಿ ಬುಧವಾರ ನೇಣು ಹಾಕಿಕೊಂಡು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಹೊಸದುರ್ಗ ಪೋಲಿಸರು ಇಬ್ಬರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮತೋರ್ವ ಮಹಿಳಾ ಆರೋಪಿ (ಮೃತಳ ಅತ್ತೆ) ತಲೆ ಮರೆಸಿಕೊಂಡಿದ್ದು ಆಕೆಯ ಪತ್ತೆ ಕಾರ್ಯದಲ್ಲಿ ಪೋಲಿಸರು ಕಾರ್ಯಾಚರಣೆ ನಡೆಸುತಿದ್ದಾರೆ.

ಈ ಘಟನೆ ಹೊಸದುರ್ಗ ಪಟ್ಟಣದ ಕಪ್ಪಗೆರೆ ರಸ್ತೆಯ ಗೋರವಿನಕಲ್ಲು ಗ್ರಾಮದಲ್ಲಿ ಬುಧವಾರ ಸಂಭವಿಸಿದ್ದು ಮೃತಳನ್ನು ಗೋರವಿನಕಲ್ಲು ಗ್ರಾಮದ ಗೀತಶ್ರೀ (32) ಎಂದು ತಿಳಿದು ಬಂದಿದ್ದು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತಳ ಗಂಡ ಮಾವ ಹಾಗೂ ಅತ್ತೆಯ ಮೇಲೆ ಪ್ರಕರಣ ದಾಖಲಾಗಿತ್ತು. ಪೋಲಿಸರು ಮೃತೆ ಗೀತಶ್ರೀ ಗಂಡ ಪ್ರಭುಕುಮಾರ ಹಾಗೂ ಪ್ರಭುಕುಮಾರನ ತಂದೆ ಮಹೇಶ್ವರಾಧ್ಯ ಇಬ್ಬರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಪುಟ 2




ಚಿತ್ರದುರ್ಗ ನಗರದ ಕೆಳಗೋಟೆಯಲ್ಲಿನ ಭಾರತೀಯ ಜನತಾ ಪಕ್ಷದ ಕಚೇರಿಯಲ್ಲಿ ಬಸವ ಜಯಂತಿ ಆಚರಣೆ ಮಾಡಲಾಯಿತು. ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೋವಿಂದ ಕಾರಜೋಳ, ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಬಿಜೆಪಿ ಅಧ್ಯಕ್ಷ ಎ.ಮುರಳಿ, ಮಧುಗಿರಿ ಬಿಜೆಪಿ ಅಧ್ಯಕ್ಷ ಹನುಮಂತೆ ಗೌಡ, ಲಿಂಗಮೂರ್ತಿ, ಡಾ.ಸಿದ್ಧಾರ್ಥ, ಚಾಲುಕ್ಯ ನವೀನ್, ಸಂಪತ್ ಕುಮಾರ್, ಶ್ಯಾಮಲಾ, ವೀಣಾ, ವಕ್ತಾರರಾದ ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್, ಮಲ್ಲಿಕಾರ್ಜುನ್, ನರೇಂದ್ರ ಇದ್ದರು.

### ಮಳೆ, ಗಾಳಿಗೆ ನೂರಾರು ಎಕರೆ ಪ್ರದೇಶದ ಬೆಳೆಗಳಿಗೆ ಹಾನಿ

**ಚಳ್ಳಕೆರೆ:** ತಾಲ್ಲೂಕಿನಾದ್ಯಂತ ಗುರುವಾರ ಬೆಳಗಿನ ಜಾವ ಬಿದ್ದ ಮಳೆ, ಗಾಳಿಗೆ ಜಮೀನಿನಲ್ಲಿದ್ದ ದಾಳಿಂಬೆ, ಬಾಳೆ, ಮೆಕ್ಕೆಜೋಳ ಬೆಳೆಗಳು ನಾಶವಾಗಿದ್ದಲ್ಲದೆ, ಮನೆಯೊಂದರ ಮೇಲೆ ಮರಬಿದ್ದು ನಷ್ಟ ಸಂಭವಿಸಿ, ಯಾವುದೇ ಪ್ರಾಣಾಹಾನಿಯಾಗಿಲ್ಲ.



ತಾಲ್ಲೂಕಿನಾದ್ಯಂತ ಬಿದ್ದ ಮಳೆ ಪ್ರಮಾಣ ಕಡಿಮೆಯಾದರೂ ನಷ್ಟ ಮಾತ್ರ ಹೆಚ್ಚಿದೆ. ನಾಯಕನಹಟ್ಟಿ–25.04, ಚಳ್ಳಕೆರೆ–8.06, ದೇವರಮರಿಕುಂಟೆ 2.04 ಒಟ್ಟು 35.14 ಎಂ.ಎಂಮಳೆಯಾಗಿದೆ.

ಪುಟ 2

**ಪ್ರಮುಖ ಸುದ್ದಿ**

# ಸಮಾಜದಲ್ಲಿ ಸಮಾನತೆ ಸಾರಿದ ಮಹಾ ಪುರುಷ ಬಸವಣ್ಣ

» **ಚಿತ್ರದುರ್ಗ**

ಮೂಢನಂಬಿಕೆಯನ್ನು ತೊರೆದು ವೈಚಾರಿಕತೆಯನ್ನು ಮೈಗೂಡಿಸಿ ಕೊಳ್ಳಬೇಕಿದೆ. ಆಗ ಮಾತ್ರ ಬಸವಣ್ಣರವರಿಗೆ ಹತ್ತಿರವಾಗಲು ಸಾಧ್ಯವಿದೆ ಎಂದು ಉಳವಿಯ ಅಕ್ಕ ನಾಗಲಾಂಬಿಕ ಯೋಗ ಪೀಠದ ಪೀಠಾಧ್ಯಕ್ಷರಾದ ಶ್ರೀ ಜಗದ್ಗುರು ಮಾತೆ ದಾನೇಶ್ವರಿ ಮಾತಾಜಿ ತಿಳಿಸಿದರು.

ನಗರದ ರಂಗಯ್ಯನ ಬಾಗಿಲ ಬಳಿಯ ಬಸವಮಂಟಪದಲ್ಲಿ ಸಾಂಸ್ಕೃತಿಕ ನಾಯಕ ವಿಶ್ವ ಗುರು ಬಸವಣ್ಣರವರ 891ನೇ ಜಯಂತಿಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಮಾತಾಜಿಯವರು, 12ನೇ ಶತಮಾನದಲ್ಲಿ ಇದ್ದ ಆಸಮಾನತೆಯನ್ನು ಕಂಡು ಬಸವಣ್ಣರವರು ಸಮಾನತೆಯನ್ನು ಸಾರಿದ ಮಹಾ ಪುರುಷ ಜಾತಿಯನ್ನು ಧಿಕ್ಕರಿಸಿ ಮಾನವಿಯತೆಗೆ ಬೆಲೆಯನ್ನು ನೀಡಿದರು. ಲಿಂಗ ಭೇಧವನ್ನು ಸಹಾ ಮಾಡದೇ ಗಂಡು–ಹೆಣ್ಣು ಇಬ್ಬರು ಒಂದೇ ಎಂಬ ಭಾವನೆಯನ್ನು ಮೂಡಿಸಿದ್ದಲ್ಲದೆ ಅದರಂತೆ ನಡೆದುಕೊಂಡರು. ಮಾತೇ ಮಹಾದೇವಿಯವರು ತಮ್ಮ ಕಾರ್ಯಕ್ರಮಗಳಲ್ಲಿ ಸರ್ಕಾರದ ಹಣವನ್ನು ಬಳಕೆ ಮಾಡದೇ ಭಕ್ತರು ನೀಡಿದ ಹಣವನ್ನು ಬಳಕೆ ಮಾಡಿಕೊಂಡಿದ್ದರು ಸರ್ಕಾರದ



ಹಣ ಬಡವರಿಗೆ ಸೇರಬೇಕು ಭಕ್ತರ ಹಣ ಮಠಗಳಿಗೆ ಸೇರಬೇಕಿದೆ ಎಂಬ ತತ್ವವನ್ನು ಆಳವಡಿಸಿಕೊಂಡಿದ್ದವರು ಎಂದರು.

ಕೂಡಲಸಂಗಮದಲ್ಲಿ 108 ಅಡಿ ಎತ್ತರದ ಬಸವಣ್ಣ ಪ್ರತಿಮೆ ನಿರ್ಮಾಣದಲ್ಲೆಯ ಸಹಾ ಸರ್ಕಾರದ ಹಣವನ್ನು ಬಳಕೆ ಮಾಡಿಕೊಂಡಿಲ್ಲ, ಇಂದಿನ ದಿನಮಾನದಲ್ಲಿ ಮೋಬೈಲ್ ಬಳಕೆ ಬಹಳವಾಗಿದೆ ಇದನ್ನು ಹೆಚ್ಚಾಗಿ ಉಪಯೋಗ ಮಾಡುವುದರಿಂದ ಮುಂದೆ ವಿವಿಧ ರೀತಿಯ ರೋಗಗಳಿಗೆ ಬಲಿಯಾಗಬೇಕಾಗುತ್ತದೆ ಇದರಿಂದ ಇದನ್ನು ಅಗತ್ಯ ಇರುವಷ್ಟಕ್ಕೆ ಮಾತ್ರವೇ ಉಪಯೋಗ ಮಾಡಿಕೊಳ್ಳಿ ಮಕ್ಕಳಿಗೆ ಸಾಧ್ಯವಾದಷ್ಟು ಮೊಬೈಲ್‌ನ್ನು ಕೂಡುವುದನ್ನು ಕಡಿಮೆ ಮಾಡಿ ಆದರೆ ಇಂದಿನ ಶಿಕ್ಷಕರುಗಳು ಹೆಚ್ಚಾಗಿ ತಮ್ಮ ಭೋದನೆಯನ್ನು ಮೊಬೈಲ್‌ನ್ನು ಬಳಕೆ ಮಾಡುವುದರಿಂದ ಮಕ್ಕಳಿಗೆ ಕೂಡುವ ಅನಿವಾರ್ಯತೆ ಉಂಟಾಗಿದೆ ಎಂದರು.

ಇಲ್ಲಿ ಯಾರು ಸಹಾ ಶಶ್ವಾತವಲ್ಲಿ ಎಲ್ಲರು ಸಹಾ ಒಂದು ದಿನ ಹೋಗುವವರೆ ಆದರೆ ಭಗವಂತ ಮಾತ್ರ ಶಾಶ್ವತ ಎನ್ನುವುದನ್ನು ಮರೆಯಬಾರದು. ಬಸವ ತತ್ವಗಳಲ್ಲಿ ನಂಬಿಕೆಯನ್ನು ಇಟ್ಟು ನಮ್ಮ ಜೀವನವನ್ನು ನಡೆಸಬೇಕಿದೆ. ತಮ್ಮ ಮಕ್ಕಳಿಗೆ ಮುಂದಿನ ಶರಣ ಮೇಳದ ಸಮಯಕ್ಕೆ ಸಮಾರು 25 ವಚನಗಳನ್ನು ಕಂಠ ಪಾಠ ಮಾಡುವುದರ ಮೂಲಕ ಬಸವ ಜಯಂತಿ ಆಚರಣೆಗೆ ಆರ್ಥ ಬರುವಂತೆ ಮಾಡಬೇಕಿದೆ ಇದರ ಬಗ್ಗೆ ಸಂಕಲ್ಪ ಮಾಡಬೇಕಿದೆ, ತಮ್ಮ ಸುಖ, ದುಃಖದಲ್ಲಿಯೂ ಬಸವಣ್ಣನ ನಾಮಸ್ಮರಣೆ ಅಗತ್ಯವಾಗಿ ಇರಬೇಕಿದೆ ಬಸವಣ್ಣರವರನ್ನು ನಂಬಿದರೆ ಭಗವಂತನ ದರ್ಶನವಾಗುತ್ತದೆ ಎಂದರು. ಕಾರ್ಯಕ್ರಮವನ್ನು ಧ್ವಜಾರೋಹಣವನ್ನು ನೇರವೇರಿಸಿದ ನಿತ್ಯವಾಣಿ ಪತ್ರಿಕೆಯ ಸಂಪಾದಕರಾದ ಎಸ್.ಟಿ,ನವೀನ್ ಕುಮಾರ್ ಮಾತನಾಡಿ, ಬಸವಣ್ಣರವರು ಜಾತಿ ಪದ್ದತಿಯನ್ನು ವಿರೋಧಿಸಿದವರು, ಲಿಂಗ ಪೂಜೆಯನ್ನು ಮಾಡುವ ನಾವೆಲ್ಲರೂ ಒಂದಾಗಬೇಕಿದೆ, ವಚನಗಳನ್ನು ಪಾಲಿಸುವುದರ ಮೂಲಕ ನಮ್ಮ ಬದುಕನ್ನು ಪಾವನ ಮಾಡಿಕೊಳ್ಳಬೇಕಿದೆ. ಬಸವಣ್ಣರವರ ಅನುಯಾಯಿಗಳಾದ ನಾವುಗಳು ಅವರ ವಚನದಂತೆ ನಡೆಯಬೇಕಿದೆ. ನಮಗೆ ಬಸವಣ್ಣರವರೇ ಬಂಗಾರವಾಗಿದ್ದಾರೆ, ಮುಂದಿನ ದಿನದಲ್ಲಿ ಇನ್ನೂ ಉತ್ತಮ ರೀತಿಯಲ್ಲಿ ಬಸವ ಜಯಂತಿಯನ್ನು ಆಚರಿಸೋಣ ಎಂದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ.ಇಂದುಧರ್, ಡಾ.ಸತೀಶ್ ಕುಮಾರ್, ನಿವೃತ್ತ ಶಿಕ್ಷಕರಾದ ಈರಪ್ಪ ಮಾತನಾಡಿದರು. ಇದೇ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ.ಇಂದುಧರ್‌ರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ಸಮ್ಮುಖವನ್ನು ಸಾಸಲಹಟ್ಟಿಯ ಅಕ್ಕಮಹಾದೇವಿ ಮಠದ ಶ್ರೀ ಬಸವೇಶ್ವರಿ ಮಾತಾಜಿ ವಹಿಸಿದ್ದರು. ಶಿರಸಿಯ ಅರಣ್ಯ ಮಹಾ ವಿದ್ಯಾಲಯದ ಡಾ.ಹೆಚ್.ಶಿವಣ್ಣ ದೀನ್ ಉದ್ಘಾಟಿಸಲಿದ್ದಾರೆ.. ರಾಷ್ಟ್ರೀಯ ಬಸವ ದಳದ ಅಧ್ಯಕ್ಷರಾದ ಜೆ.ಸಿ.ಮನೋಹರ್, ಸವಿತಾ ಸಮಾಜದ ರಾಜಣ್ಣ, ಭಾಗವಹಿಸಿದ್ದರು. ಬೆಳಿಗ್ಗೆ 9 ಗಂಟೆಗೆ ಮರವಣಿಗೆ, ಗುರುಬಸವಪೂಜೆ, ಧ್ವಜಾರೋಹಣ, ತೊಟ್ಟಿಲು ಕಾರ್ಯಕ್ರಮ ನಡೆಸಲಾಯಿತು. ಕಾರ್ಯಕ್ರಮದ ನಂತರ ಬಸವ ಮಂಟಪದ ಮಕ್ಕಳಿಂದ ವಚನ ನೃತ್ಯ ಕಾರ್ಯಕ್ರಮ ನಡೆಯಿತು. ಅಕ್ಕಮಹಾದೇವಿ, ಈರಮ್ಮ, ವನಜಾ ಪ್ರಾರ್ಥಿಸಿದರೆ, ಕಲ್ಮೇಶ್ ಸ್ವಾಗತಿಸಿದರು. ಶಂಕರಪ್ಪ ವಂದಿಸಿದರು. ವಚನಸುಧಾ ಕಾರ್ಯಕ್ರಮ ನಿರೂಪಿಸಿದರು.

## ಫಾಸ್ಟ್ ನ್ಯೂಸ್

### ಹೃದಯದಲ್ಲಿ ಬಸವೇಶ್ವರ ಅನಾವರಣವಾಗಲಿ

» ಮೊದಲ ಪುಟದಿಂದ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ನಿರೂಪಿಸಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಗ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸೇರಿದಂತೆ ವೀರಶೈವ ಸಮಾಜದ ಕಾರ್ಯದರ್ಶಿ ವೀರೇಂದ್ರ ಕುಮಾರ್, ಸಹಕಾರ್ಯದರ್ಶಿ ಜಿತೇಂದ್ರ ಹುಲಿಕುಂಟೆ, ಅಖಿಲ ಭಾರತ ವೀರಶೈವ ಮಹಾಸಭಾ ಪ್ರಧಾನ ಕಾರ್ಯದರ್ಶಿ ಜಿ.ಎನ್. ಮಹೇಶ್, ಕಾರ್ಯದರ್ಶಿ ದಿವಾಕರ್, ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲ ಬಸವರಾಜ್, ಕಾರ್ಯದರ್ಶಿರೀನಾವೀರಭದ್ರಪ್ಪ,ಮುಖಂಡರಾದ ಮೋಕ್ಷಾರುದ್ರಸ್ವಾಮಿ, ರುದ್ರೇಶ್ ಐಗಾಳ್, ಹೇಮರೆಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ, ಉಪಾಧ್ಯಕ್ಷರಾದ ನಾಗರಾಜ್ ಸಂಗಮ್, ಕೆ.ಪಿ.ಬಸವರಾಜ್, ಖಜಾಂಚಿ ದಯಾನಂದ ಪಾಟೀಲ್, ಶಿವಸಿಂಪಿ ಸಮಾಜದ ಜಿಲ್ಲಾಧ್ಯಕ್ಷ ಜಯದೇವಪ್ಪ ಸೇರಿದಂತೆ ಮತ್ತಿತರರು ಇದ್ದರು.

### ಮಳೆ, ಗಾಳಿಗೆ ನೂರಾರು ಎಕರೆ ಪ್ರದೇಶದ ಬೆಳೆಗಳಿಗೆ ಹಾನಿ

» ಮೊದಲ ಪುಟದಿಂದ

ಪರಶುರಾಮಪುರ ಮತ್ತು ತಳಕು ಪ್ರಾಂತದಲ್ಲಿ ಮಳೆಯಾಗಿಲ್ಲ. ತಳಕು ಹೋಬಳಿಯ ಹೊನ್ನೂರು ಗ್ರಾಮದ ಸಣ್ಣಓಬಕ್ಕ ಎಂಬುವವರ ಮನೆ ಮೇಲೆ ಮರಬಿದ್ದು ಸುಮಾರು 50 ಸಾವಿರ ನಷ್ಟಸಂಭವಿಸಿದೆ. ಘಟಪರ್ತಿಯ ಟಿ.ಓಬಣ್ಣ ಎಂಬುವವರ 2.20 ಎಕರೆ ಪ್ರದೇಶದಲ್ಲಿದ್ದ ಬಾಳೆ ಬೆಳೆ ಗಾಳಿಯಿಂದ ನೆಲಕಚ್ಚಿ ಲಕ್ಷಾಂತರ ರೂನಷ್ಟವಾಗಿದೆ. ಮೈಲನಹಳ್ಳಿ ಗ್ರಾಮದ ಸಣ್ಣ ಚಿಕ್ಕಣ್ಣ ಎಂಬುವವರ ಆರು ಎಕರೆ ಪ್ರದೇಶದ ಮೆಕ್ಕೆಜೋಳ ಮಳೆ, ಗಾಳಿಗೆ ಸಿಕ್ಕಿ ಸಂಪೂರ್ಣ ನಾಶವಾಗಿದೆ. ತಾಲ್ಲೂಕಿನ ಕಾಟಂದೇವರಕೋಟೆ ಗ್ರಾಮದ ಗೌರಮ್ಮ ಎಂಬುವವರ ಮೂರು ಎಕರೆ ಪ್ರದೇಶದ ಬಾಳೆ ಮಳೆಯಿಂದ ಸಂಪೂರ್ಣವಾಗಿ ಕೊಚ್ಚಿಹೋಗಿ 80 ಸಾವಿರ ನಷ್ಟ ಸಂಭವಿಸಿದೆ. ಇದೇ ಗ್ರಾಮದ ವಸಂತರೆಡ್ಡಿ ಎರಡು ಎಕರೆ ಪ್ರದೇಶದ ದಾಳಿಂಬೆ ಬೆಳೆ ಮಳೆಗೆ ಹಾನಿಯಾಗಿ 90 ಸಾವಿರ ನಷ್ಟ ಸಂಭವಿಸಿದೆ. ಈರಣ್ಣ ಎಂಬುವವರ 1.21 ಎಕರೆ ಪ್ರದೇಶದ ಮೆಕ್ಕೆಜೋಳ ನೀರಿಗೆ ಆಹುತಿಯಾಗಿ 30 ಸಾವಿರ ನಷ್ಟ ಸಂಭವಿಸಿದೆ. ಸಂಬಂಧಪಟ್ಟ ಕಂದಾಯ ಇಲಾಖೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಆಗಿರುವ ನಷ್ಟದ ಅಂದಾಜಿನ ಮಾಹಿತಿಯನ್ನು ತಾಲ್ಲೂಕು ಆಡಳಿತಕ್ಕೆ ತುರ್ತಾಗಿ ನೀಡಿದ್ಧಾರೆ.

### ಖಾಸಗಿ ಶಾಲಾ ಶಿಕ್ಷಕಿ ಗೀತಶ್ರೀ ಸಾವಿನ ಪ್ರಕರಣ ಗಂಡ, ಮಾವನ ಬಂಧನ

» ಮೊದಲ ಪುಟದಿಂದ

ಘಟನೆಯ ವಿವರ: ಮೂಲತಹ ತುಮಕೂರು ನಿವಾಸಿಯಾಗಿದ್ದ ಗೀತಶ್ರೀ ಯನ್ನು 2016 ರಲ್ಲಿ ಹೊಸದುರ್ಗ ಪಟ್ಟಣದ ನಿವಾಸಿ ಪ್ರಭುಕುಮಾರ ಎಂಬುವವರಿಗೆ ಕೊಟ್ಟು ವಿವಾಹ ಮಾಡಿಕೊಡಲಾಗಿತ್ತು,ಮಾದುವೆಯಾದ ನಂತರ ಗೀತಶ್ರೀ ಹೊಸದುರ್ಗ ಪಟ್ಟಣದಲ್ಲಿ ಖಾಸಗಿ ಶಾಲೆಯೊಂದರಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದಳು ಈ ದಂಪತಿಗೆ 6 ವರ್ಷದ ಹೆಣ್ಣು ಮಗುವಿದ್ದು.ಗೀತಶ್ರೀಯ ಗಂಡ ಪ್ರಭುಕುಮಾರ ಕೆಲಸ ಮಾಡದೆ ವಿಲಾಸಿ ಜೀವನ ನಡೆಸುತ್ತಿದ್ದ ಎಂದು ಗೀತಶ್ರೀ ತಂದೆ ಮಲ್ಲಿಖಾರ್ಜುನ ನೀಡಿರುವ ದೂರಿನಲ್ಲಿ ಉಲ್ಲೇಖಿಸಲಾಗಿದ್ದು ಹೆಂಡತಿ ತರುತಿದ್ದ ಹಣದಲ್ಲೆ ಜೀವನ ನಡೆಸುತಿದ್ದ,ಅಲ್ಲೆ ಆಕೆ ಮಾವ ಹಾಗು ಅತ್ತೆ ಕೂಡ ಸಂಬಳದ ಹಣ ಕೊಡುವಂತೆ ಪೀಡಿಸುತ್ತಿದ್ದರು.ಸಂಬಳದ ಹಣ ಕೊಡದಿದ್ದ ಹಿನ್ನೆಲೆಯಲ್ಲಿ ನನ್ನ ಮಗಳನ್ನ ಕೊಲೆ ಮಾಡಿ ನೇಣು ಹಾಕಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಹೇಳುತ್ತಿದ್ದಾರೆ ಎಂದು ಪೋಲಿಸರಿಗೆ ನೀಡಿರುವ ದೂರಿನಲ್ಲಿ ಆರೋಪಿಸಲಾಗಿದೆ.

### ಮೇ 12 ರಂದು ಶ್ರೀ ಶಂಕರಾಚಾರ್ಯ ಜಯಂತಿ ಉತ್ಸವ

» ಹೊಸದುರ್ಗ

ತಾಲೂಕಿನ ಬೆಲಗೂರು ಗ್ರಾಮದ ಶ್ರೀ ವೀರ ಪ್ರತಾಪ ಆಂಜನೇಯ ಸ್ವಾಮಿ ಸನ್ನಿಧಿ ಮಾರುತಿ ಪೀಠದಲ್ಲಿ ಮೇ 12 ಭಾನುವಾರದಂದು ಶ್ರೀ ಶಂಕರಾಚಾರ್ಯರ ಜಯಂತಿಯನ್ನ ಆಯೋಜಿಸಲಾಗಿದೆ ಎಂದು ಬೆಲಗೂರು ಮಾರುತಿ ಪೀಠದ ಶ್ರೀ ವಿಜಯ ಮಾರುತಿ ಶರ್ಮಾ ಶ್ರೀಗಳು ತಿಳಿಸಿದರು. ಶ್ರೀಮಠದಲ್ಲಿ ಶುಕ್ರವಾರ ಸುದ್ದಿಗಾರರಿಗೆ ಮಾಹಿತಿ ನೀಡಿದ ಶ್ರೀಗಳು ಅಂದು ಬೆಳಗ್ಗೆ 8 ಗಂಟೆಗೆ ಶ್ರೀ ಶಂಕರಾಚಾರ್ಯರಿಗೆ ವಿಶೇಷವಾಗಿ ಪೂಜೆ. ಮತ್ತು ಬೆಳಗ್ಗೆ 9 ಗಂಟೆಗೆ ವಿಶೇಷವಾಗಿ ನಾನಾ ರೀತಿಯ ಹೂವಿನಿಂದ ಅಲಂಕಾರ ಮಾಡಿ ಶ್ರೀ ಶಂಕರಾಚಾರ್ಯರಿಗೆ ಪಲ್ಲಕ್ಕಿ ಉತ್ಸವ ಮಾಡಲಾಗುವುದು, ಈ ಒಂದು ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸುವಂತೆ ಮನವಿ ಮಾಡಿದರು .

## ಮಾದಾರ ಚನ್ನಯ್ಯ ಗುರುಪೀಠಕ್ಕೆ ವಟು ಸ್ವೀಕಾರ ಕಾರ್ಯಕ್ರಮ

# ಲೇಖನ್ ಈಗ ಜಯ ಬಸವ ದೇವರು

» ಚಿತ್ರದುರ್ಗ







ನಗರದ ಹೊರವಲಯದಲ್ಲಿರುವ ಶಿವಶರಣ ಮಾದಾರ ಚನ್ನಯ್ಯ ಗುರುಪೀಠಕ್ಕೆ ವಟು ಸ್ವೀಕಾರ ಸಮಾರಂಭ ಇಂದು ನಡೆದಿದ್ದು, ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಯವರು ವಟು ಸ್ವೀಕಾರ ಮಾಡಿದರು. ಮಠದ ಆವರಣದಲ್ಲಿರುವ ಬಸವಾದಿ ಶರಣರ ಧರ್ಮ ಸಂಸತ್ ಸಭಾ ಮಂಟಪದಲ್ಲಿ ವಟು ಸ್ವೀಕಾರ ಧಾರ್ಮಿಕ ಕಾರ್ಯಗಳು ನಡೆದವು.

ನೂತನ ವಟುವಿಗೆ ಜಯಬಸವ ದೇವರು ಎಂದು ನಾಮಕರಣ ಮಾಡಲಾಯಿತು. ಬೆಳಗ್ಗೆ 8 ಗಂಟೆಗೆ ಪ್ರಾರಂಭವಾದ ವಟು ಸ್ವೀಕಾರ ಸಮಾರಂಭದಲ್ಲಿ ಲಿಂಗಧೀಕ್ಷೆ, ವಿಭೂತಿ ಧಾರಣೆ, ಲಿಂಗಧಾರಣೆ, ಹಸ್ತಮಸ್ತಕ ಸಂಯೋಜನೆ, ಪಾದಪೂಜೆ ಸೇರಿದಂತೆ ಬಸವ ತತ್ವದ ಪ್ರಕಾರ ಧಾರ್ಮಿಕ ವಿಧಿ ವಿಧಾನ ನೆರವೇರಿದವು. ತದ ನಂತರ ನೂತನ ವಟು ಜೋಳಿಗೆಯನ್ನು ಹಾಕಿಕೊಂಡು ಅಲ್ಲಿ ನೆರದಿದ್ದವರಿಂದ ಕಾಣಿಕೆಯನ್ನು ಸ್ವೀಕಾರ ಮಾಡುವುದರ ಮೂಲಕ ಸನ್ಯಾಸತ್ವನ್ನು ಪಾಲಿಸಿದರು. ಶುಭ್ರವಾದ ಬಿಳಿ ವಸ್ತ್ರದಲ್ಲಿ ಪೈಜಾಮ್ ಧರಿಸಿದ್ದ ಲೇಖನ್ ವಟುವಾಗಿ ಸ್ವೀಕಾರವಾದ ನಂತರ ಬಿಳಿ ವಸ್ತವಾದ ಪಂಚೆಯನ್ನು ಧರಿಸಿ ಮೈಮೇಲೆ ಬಿಳಿ ವಸ್ತ್ರವನ್ನು ಹಾಕಿಕೊಂಡು ಮಾದಾರ ಚನ್ನಯ್ಯ ಶ್ರೀಗಳೊಂದಿಗೆ ಲಿಂಗಪೂಜೆಯನ್ನು ನೇರವೇರಿಸಿ ತದ ನಂತರ ಶ್ರೀಗಳ ಪಾದ ಪೂಜೆಯನ್ನು ನೇರವೇರಿಸಲಾಯಿತು.

ಮಾದಾರ ಚನ್ನಯ್ಯ ಗುರುಪೀಠಕ್ಕೆ ಸ್ವೀಕಾರ ಮಾಡಿರುವ ವಟು ಜಯಬಸವ ದೇವರ ಮೂಲ ಊರು, ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರದ ಸವಿತಾ ಮಹಾಲಿಂಗಪ್ಪ ದಂಪತಿಗಳ ಎರಡನೇ ಪುತ್ರ 9 ವರ್ಷದ ಲಖನ್ ಮಠಕ್ಕೆ ವಟು ಆಗಿದ್ದಾರೆ. ಈ ದಂಪತಿಗೆ ಒಟ್ಟು ನಾಲ್ವರು ಮಕ್ಕಳಿದ್ದು, ಇಬ್ಬರು ಪುತ್ರಿಯರು, ಇಬ್ಬರು ಪುತ್ರರು. ಇದರಲ್ಲಿ ಎರಡನೇ ಮಗ ಲಖನ್ ಅವರನ್ನು ಮಠಕ್ಕೆ ನೀಡಲಾಗಿದೆ.

ವಟು ಸ್ವೀಕಾರ ಸಮಾರಂಭದಲ್ಲಿ ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಹೊಸದುರ್ಗ ಕುಂಚಿಟಿಗ ಮಹಾಸಂಸ್ಥಾನ ಮಠದ ಶ್ರೀ ಶಾಂತವೀರ ಮಹಾಸ್ವಾಮಿಜಿ, ಭಗಿರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಹೊಸದುರ್ಗ, ಕನಕ ಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ, ಕಬೀರಾನಂದ ಆಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮೀಜಿ, ಹಂಪಿಯ ಮಾತಂಗಮುನಿಮಠದಶ್ರೀಮಾತಂಗಮುನಿ ಸ್ವಾಮೀಜಿ, ಲಂಬಾಣಿ ಗುರುಪೀಠದ ಶ್ರೀ ನಂದ ಮಸಂದ ಸ್ವಾಮಿಗಳು, ಚಿತ್ರದುರ್ಗದ ಶ್ರೀ ವೇದಾರ ಗುರುಪೀಠದ ಕೇತೇಶ್ವರ ಸ್ವಾಮೀಜಿ,ಕೊರಟಗೆರೆಯ ಶ್ರೀ ಮಹಾಲಿಂಗ ಸ್ವಾಮಿಗಳು,ರಾಣೆಬೆನ್ನೂರಿನ ಶ್ರೀ ಗಜದಂಡ ಸ್ವಾಮಿಗಳು, ಸಿದ್ದಾರೂಢ ಆಶ್ರಮದ ಶ್ರೀ ಜಯದೇವ ಸ್ವಾಮಿಗಳು, ತಿಳುವಳ್ಳಿಯ ಶ್ರೀ ನಿರಂಜನಾಂದ ಸ್ವಾಮಿಗಳು ಶ್ರೀ ತಿಪ್ಪೇರುದ್ರ ಸ್ವಾಮಿಗಳು ಸತ್ಯಕ್ಕ ಜಯದೇವಿತಾಯಿ ಶ್ರೀ ಪೂರ್ಣಾನಂದ ಸ್ವಾಮಿಗಳು ಇದ್ದರು.

# ಮಾನವ ಹಕ್ಕುಗಳ ಪ್ರತಿಪಾದಕ ಬಸವಣ್ಣ

» ದಾವಣಗೆರೆ



ಬಸವಣ್ಣನವರು ಜಾತಿ, ಧರ್ಮ, ವರ್ಗ, ಲಿಂಗಾಧಾರಿತ, ಅಸಮಾನತೆ ಇಲ್ಲದ ಸಮಬಾಳಿನ ಸಮತೆಯ ಸಮಾಜ ಕಟ್ಟಲು ಹೋರಾಡಿದ ಮಾನವ ಹಕ್ಕುಗಳ ಪ್ರತಿಪಾದಕ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್ ಹೇಳಿದರು.

ನಗರದ ಕೆ.ಬಿ.ಬಡಾವಣೆಯಲ್ಲಿನ ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಕಾರ್ಯಾಲಯದಲ್ಲಿ ನಡೆದ ಬಸವ ಜಯಂತಿ ಕಾರ್ಯಕ್ರಮವನ್ನು ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಕಾಯಕ ಜೀವಿಗಳು, ದಲಿತರು, ದಮನಿತರು, ಮಹಿಳೆಯರನ್ನು ವಚನ ಚಳುವಳಿಯಲ್ಲಿ ಪಾಲ್ಗೊಳ್ಳುವಲ್ಲಿ ಪ್ರೇರೇಪಿಸಿದ ಬಸವಣ್ಣ, ಆ ಮೂಲಕ ಸಮಾನತೆ, ಜಾತ್ಯಾತೀತ, ಭ್ರಾತೃತ್ವದ ಸಮಾಜ ನಿರ್ಮಾಣಕ್ಕೆ ಪಣ ತೊಟ್ಟಿದ್ದರು. ಅಲ್ಲದೇ ಸಾಮಾಜಿಕ ಕ್ರಾಂತಿಯ ಬೀಜಗಳನ್ನು ಬಿತ್ತಿದ ಮಹಾನ್ ಮಾನವತಾವಾದಿ ಹರಿಕಾರ ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಬಿ.ಪರಮೇಶ್ವರಪ್ಪ ಮಾತನಾಡಿ, ಬಸವಣ್ಣನವರು ಎಲ್ಲರಿಗೂ ವೈಚಾರಿಕ ಗುರುವಾಗಿದ್ದು, ಅಂಧಶ್ರದ್ಧೆ, ಮೂಢನಂಬಿಕೆ,ಶೋಷಣೆಗಳ ವಿರುದ್ಧ ಹೋರಾಟ ನಡೆಸಿ, ಜನರನ್ನು ಜಾಗೃತಿಗೊಳಿಸಿದರು ಎಂದು ಹೇಳಿದರು.

ಶರಣ ಸಾಹಿತ್ಯ ಪರಿಷತ್ತಿನ ನಗರ ಘಟಕದ ಗೌರವಾಧ್ಯಕ್ಷ ಎಂ.ಎಸ್.ನಾಗರಾಜಪ್ಪ ಮಾತನಾಡಿ, ಬಸವಣ್ಣವರ ವಚನಗಳೇ ಸಂವಿಧಾನದ ಆಶಯಗಳಾಗಿದ್ದು, ಅವರು ನಿರ್ಮಿಸಿದ ಅನುಭವ ಮಂಟಪ ಪ್ರಜಾಪ್ರಭುತ್ವದ ಮೊದಲ ಸಂಸತ್ತು ಆಗಿತ್ತು ಎಂದರು.

ಶರಣ ಸಾಹಿತ್ಯ ಪರಿಷತ್ತಿನ ನಗರ ಘಟಕದ ಅಧ್ಯಕ್ಷ ಎಂ.ಪರಮೇಶ್ವರಪ್ಪ ಸಿರಿಗೆರೆ ಮಾತನಾಡಿ, ವಚನ ಚಳುವಳಿ ಮೂಲಕ ಮಹಿಳಾ ಹೋರಾಟಗಾರರನ್ನು ಬೆಳಕಿಗೆ ತಂದ ಶರಣರ ಪರಂಪರೆ ನಮಗೆಲ್ಲರಿಗೂ ಆದರ್ಶವಾಗಿದೆ ಎಂದರು.ಸಾಹಿತಿ ಡಾ.ಎ.ಶಿವನಗೌಡ ಕಡಬಗೆರೆ ಮಾತನಾಡಿ, ಕಾಯಕ ಸಂಸ್ಕೃತಿಯ ಮೂಲಕ ನಾಡಿನ ಸಾಂಸ್ಕೃತಿಕ ಹೋರಾಟಗಾರರಾಗಿ ಹೊರ ಹೊಮ್ಮಿದ ಬಸವಣ್ಣನವರ ಆದರ್ಶಗಳು ಇಂದಿನ ಯುವಜನರಿಗೆ ಸ್ಫೂರ್ತಿಯಾಗಿವೆ ಎಂದು ಹೇಳಿದರು.ಈ ವೇಳೆ ಸ್ಫೂರ್ತಿ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ಎನ್.ಎಸ್.ರಾಜು ಸ್ವಾಗತಿಸಿದರು. ಸಾಹಿತಿ ಎಸ್.ಸಿದ್ದೇಶ್ ಕುರ್ಕಿ ಕಾರ್ಯಕ್ರಮ ನಿರೂಪಿಸಿದರು. ಎಂ.ಎಸ್.ಶಿವಕುಮಾರ ಸ್ವಾಮಿ ವಂದಿಸಿದರು. ಕಾರ್ಯಕ್ರಮದಲ್ಲಿ ವಕೀಲ ಆರ್. ಯೋಗೇಶ್ವರಪ್ಪ ಇದ್ದರು.

## ಬಸವೇಶ್ವರರರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಸಚಿವ ಡಿ.ಸುಧಾಕರ್, ಶಾಸಕ ರಘುಮೂರ್ತಿ

# ಬಸವಣ್ಣ ತತ್ವಾದರ್ಶ ಸಮಾಜಕ್ಕೆ ಮಾರ್ಗದರ್ಶನ



» ಚಳ್ಳಕೆರೆ

ನಗರದ ಬೆಂಗಳೂರು ರಸ್ತೆಯ ಬಸವೇಶ್ವರ ವೃತ್ತದಲ್ಲಿರುವ ಜಗಜ್ಯೋತಿ ಬಸವಣ್ಣನವರ ಪ್ರತಿಮೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾಲಾರ್ಪಣೆ ಮಾಡುವ ಮೂಲಕ ಬಸವ ಜಯಂತಿಯ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ರಾಜ್ಯದಲ್ಲಿ ಇನ್ನೂ ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಹಿನ್ನೆಲೆಯಲ್ಲಿ ಸಚಿವ ಡಿ.ಸುಧಾಕರ್ ಕೇವಲ ಜಗಜ್ಯೋತಿ ಬಸವೇಶ್ವರರ ಜಯಂತಿಯ ಶುಭಾಶಯಗಳನ್ನಷ್ಟೇ ವಿನಿಮಯ ಮಾಡಿಕೊಳ್ಳುವುದಾಗಿ ತಿಳಿಸಿದರು. ಬಸವಣ್ಣನವರ ತತ್ವಾದರ್ಶಗಳು ಸಮಾಜಕ್ಕೆ ಸದಾಸ್ಫೂರ್ತಿ ಎಂದರು. ಕ್ಷೇತ್ರದ ಶಾಸಕ, ಸಣ್ಣಕೈಗಾರಿಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಬಸವ ಜಯಂತಿ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ನಡೆಸಲು ಸಮುದಾಯ ಎಲ್ಲಾ ಮುಖಂಡರು ಸೇರಿದ್ದೀರಿ, 12ನೇ ಶತಮಾನದಲ್ಲಿಯೇ ಸಮಾಜದಲ್ಲಿ ಬದಲಾವಣೆಯನ್ನು ತರಲು ಬಸವಣ್ಣನವರ ಪ್ರಯತ್ನಿಸಿದಾಗ ವಿರೋಧ ಹೆಚ್ಚಾದರೂ ಸಮಾಜ ಉಳಿವಿಗಾಗಿ ಅವರು ಮಾಡಿದ ಸೇವೆ ಇಂದಿಗೂ ಶಾಶ್ವತವಾಗಿದೆ ಎಂದರು. ಅಧ್ಯಕ್ಷ ಕೆ.ಸಿ.ನಾಗರಾಜು, ಕಾರ್ಯದರ್ಶಿ ಹೊಸಮನೆಸ್ವಾಮಿ, ಟಿಎಟಿಪ್ರಭುದೇವ್, ಮಹಿಳಾ ಘಟಕದ ಅಧ್ಯಕ್ಷೆ ಪದ್ಮನಾಗರಾಜು, ಕಾರ್ಯದರ್ಶಿ ಮಂಜುಳಾಕೆ.ಸಿ.ನಾಗರಾಜು, ಗೌರವಾಧ್ಯಕ್ಷೆ ಅನ್ನಪೂರ್ಣಪ್ರಕಾಶ್, ಬಿ.ಎಸ್.ಶಿವಪುತ್ರಪ್ಪ, ಆರೋಗ್ಯ ರಕ್ಷಾ ಸಮಿತಿ ಸದಸ್ಯ ಸ್ವಾಮಿ, ನಿಡಗಲ್‌ಶಂಕರ, ಕುಮಾರಸ್ವಾಮಿ, ಯೋಗೇಶ್, ಕೆ.ಎಂ.ಕೊಟ್ರೇಶ್ ಮುಂತಾದವರು ಉಪಸ್ಥಿತರಿದ್ದರು.

# ಎಲೆಬೇತೂರು ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ

**ಹೊಸದುರ್ಗ:** ದಾವಣಗೆರೆ ಜಿಲ್ಲೆಯ ಎಲೆಬೇತೂರಿನ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಕೊಂಡಜ್ಜಿ ಬಸಪ್ಪ ಮತ್ತು ಶ್ರೀ ತರಳಬಾಳು ಪ್ರೌಢಶಾಲೆಯ ಈ ಬಾರಿಯ ಎಸ್ ಎಸ್ ಎಲ್ ಸಿ ಫಲಿತಾಂಶ ಪ್ರಕಟವಾಗಿದ್ದು ಕನ್ನಡ ಮಾಧ್ಯಮದಲ್ಲಿ ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳು  42. ಉತ್ತೀರ್ಣರಾದ ವಿದ್ಯಾರ್ಥಿಗಳು – 37. ಶೇ. 88 ರಷ್ಟು ಫಲಿತಾಂಶ ಲಭಿಸಿದು ಸುಪ್ರಭೆ ಡಿ ಎಸ್ – 608 (97.28%). ಇದು ಶಾಲೆಯ ಸಾರ್ವಕಾಲಿಕ ದಾಖಲೆಯಾಗಿದ್ದು, ಇಲ್ಲಿಯೇ ಆಧ್ಯಾಪಕರಾಗಿರುವ ಹೆಚ್ ಎಸ್ ದ್ಯಾಮೇಶ್ ಮತ್ತು ಹೊಳಲ್ಕೆರೆ ತಾಲ್ಲೂಕು ಕೆಂಚಾಪುರದ ಶ್ರೀ ರಂಗನಾಥ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿಯಾದ ಬಿ ಎಸ್ ಸುಜಾತ ಇವರ ಮಗಳು. ಸುಪ್ರಭೆ ಡಿ.ಎಸ್ ಹಿಂದಿಯಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದಿರುತ್ತಾಳೆ. ತಮ್ಮ ಮಕ್ಕಳನ್ನು ತಮ್ಮದೇ ಶಾಲೆಯಲ್ಲಿ ಅದರಲ್ಲೂ ಕನ್ನಡ ಮಾಧ್ಯಮದಲ್ಲಿ ಸೇರಿಸಿ ಉತ್ತಮ ದಾಖಲೆ ನಿರ್ಮಾಣ ಮಾಡಿ ಮಾದರಿಯಾಗಿದ್ದಾರೆ. ಶ್ರೀ ಪಂಡಿತಾರಾಧ್ಯ ಸ್ವಾಮಿಗಳವರುಶುಭ ಹಾರೈಸಿದ್ದಾರೆ.

## ಪ್ರಮುಖ ಸುದ್ದಿ

# ಬಸವಣ್ಣನ ಚಿಂತನೆಯಲ್ಲಿದೆ ಚೈತನ್ಯದ ಶಕ್ತಿ: ಸ್ವಾಮೀಜಿ

» ಚಿತ್ರದುರ್ಗ



ಬಸವಣ್ಣರವರ ಉದಾತ್ತ ಚಿಂತನೆಗಳು ನಮ್ಮ ಬುದ್ಧಿ, ಮನಸ್ಸುಗಳನ್ನು ಕ್ರಿಯಾಶೀಲವಾಗಿಸುವ, ಚೈತನ್ಯ ತುಂಬುವ ಒಂದು ಅದ್ಭುತ ಶಕ್ತಿ. ಅವರ ಸಾಹಿತ್ಯ ನಮ್ಮನ್ನು ಚಿಂತಿಸುವುದಕ್ಕೆ ಪ್ರೇರೇಪಿಸುತ್ತದೆ, ಮೌಲ್ಯಗಳನ್ನು ಪರಿಚಯಿಸುತ್ತದೆ, ಆದರ್ಶಗಳನ್ನು ತೋರಿಸಿಕೊಡುತ್ತದೆ ಎಂದು ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ತಿಳಿಸಿದರು.

ನಗರದ ಹೊರ ವಲಯದ ಭೋವಿ ಗುರುಪೀಠದಲ್ಲಿ ಬಸವ ಜಯಂತಿಯ ಅಂಗವಾಗಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಬಸವಣ್ಣರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಶ್ರೀಗಳು, ಬಸವಣ್ಣನವರು ಸಮಾಜೋ–ಧಾರ್ಮಿಕ ಸುಧಾರಕರು. ಬಸವಣ್ಣನವರ ಜೀವನ ಸಂದೇಶದಿಂದ ಉದಾತ್ತ ನಿಲುವಿನಿಂದ ಅಧ್ಯಯನ ಕೈಗೊಳ್ಳಬೇಕು. ಬಸವಣ್ಣನವರ ಬದುಕು ಸರಳವಾದದ್ದು ಸತತ ಪ್ರಯತ್ನದಿಂದ ಕೂಡಿದ್ದು ಬದಲಾವಣೆ ತಂದವರು, ಅವರ ವಚನಗಳು ಉದಾತ್ತ ಚಿಂತನೆಗಳಿಂದ ಒಳಗೊಂಡಿದೆ ಎಂದರು.

ಬಸವಣ್ಣನವರ ವಚನಗಳಲ್ಲಿ ಉಪಮಾನಗಳಅಪುರ್ವತೆಮತ್ತುನವೀನತೆ, ಮೃದುಹಾಸ್ಯ, ಶ್ಲೇಷೆ, ವಸ್ತುವಿನ ನೂತನತೆ, ಸಮಾಜದ ನ್ಯೂನತೆ, ಅನುಭಾವಿಕತೆ, ಮೃದುಮಧುರ ಶೈಲಿ, ನಿಷ್ಠಾವಂತರ ನಿಷ್ಠೂರತೆ, ಪ್ರತಿಮಾಯೋಜನೆ, ಸೂಕ್ಷ್ಮ ಪರಿವೀಕ್ಷಣೆ, ಜೀವನದ ಕಟು ಅನುಭವಗಳ ನೈಜನಿರೂಪಣೆ, ಸರಳತೆ, ಅಭಿವ್ಯಕ್ತಿಯ ಪರಿಣಾಮ ರಮಣೀಯತೆ, ಭಕ್ತಿಯ ತೀವ್ರತೆಗಳಿಂದ ವಿಭಿನ್ನ ಮನಸ್ಸುಗಳಿಗೆ ಸಮಾಧಾನದ ವಿವರಣೆ ಸಿಗುತ್ತದೆ ಎಂದು ತಿಳಿಸಿದರು.

ಅವರಉದಾತ್ತಚಿಂತನೆಗಳುನಮ್ಮಬುದ್ಧಿ, ಮನಸ್ಸುಗಳನ್ನು ಕ್ರಿಯಾಶೀಲವಾಗಿಸುವ, ಚೈತನ್ಯ ತುಂಬುವ ಒಂದು ಅದ್ಭುತ ಶಕ್ತಿ. ಅವರ ಸಾಹಿತ್ಯ ನಮ್ಮನ್ನು ಚಿಂತಿಸುವುದಕ್ಕೆ ಪ್ರೇರೇಪಿಸುತ್ತದೆ, ಮೌಲ್ಯಗಳನ್ನು ಪರಿಚಯಿಸುತ್ತದೆ, ಆದರ್ಶಗಳನ್ನು ತೋರಿಸಿಕೊಡುತ್ತದೆ, ಬದುಕಿನ ಪ್ರಶ್ನೆಗೆ ಪರಿಹಾರ ಪಡೆಯುವಲ್ಲಿ ನೆರವಾಗಬಲ್ಲದು. ಉದಾತ್ತ ಸಂದೇಶಗಳನ್ನು ಒಳಗೊಂಡ ಅವರ ವಿಚಾರಗಳು ಸಮಗ್ರ ಬೌದ್ಧಿಕ ಮತ್ತು ಭಾವನಾತ್ಮಕ ವಿಚಾರಗಳ ಸಾರ್ಥಕ್ಯವನ್ನು ಪಡೆಯುತ್ತೇವೆ ಎಂದರು.

ಕುಂಚಿಟಿಗ ಮಹಾಸಂಸ್ಥಾನ ಮಠದ ಶ್ರೀ ಶಾಂತವೀರ ಮಹಾಸ್ವಾಮೀಜಿ ಮಾತನಾಡಿ, ಹನ್ನೆರಡನೆ ಶತಮಾನದಲ್ಲಿ ಕನ್ನಡನಾಡಿನಲ್ಲಿ ಮಹಾತ್ಮಾ ಬಸವೇಶ್ವರರು ಹಾಗೂ ಅವರನ್ನು ಅನುಸರಿಸಿದ ಅಸಂಖ್ಯಾತ ಶಿವಶರಣರ ವಿಚಾರಧಾರೆಗಳು ಮಾತ್ರ ಅತ್ಯಂತ ಶ್ರೇಷ್ಠ ಮಾರ್ಗವನ್ನು ಹಾಕಿಕೊಟ್ಟಿವೆ ಎಂಬುದು ಮಾತ್ರ ಸತ್ಯ ಸಂಗತಿ ಎಂದು ತಿಳಿಸಿದರು.

ಬಸವ ಮಾರ್ಗ ಸರಳ ಸಹಜ ಮಾರ್ಗ ಈ ಮಾರ್ಗದ ಪ್ರಕಾರ ಸ್ವರ್ಗ ಮತ್ತು ಭೂಲೋಕಗಳು ಬೇರೆಯಾಗಿ ಇಲ್ಲ. ಬದುಕಿನ ಶುದ್ಧಿಗಾಗಿ ಮನಸ್ಸಿನ ಶುದ್ಧಿ ಅವಶ್ಯಕ. ಮನಸ್ಸುದ್ಧಿಯಾ ದಾಗ ನಮ್ಮ ನಡೆನುಡಿಗಳು ಶುದ್ಧವಾಗುತ್ತವೆ. ನಡೆ–ನುಡಿಗಳು ಶುದ್ಧಿಯಾದಾಗ ಅಂಥವನಿಗೆ ಆತ್ಮ ತೃಪ್ತಿಯ ಜೊತೆಗೆ ಸಾಮಾಜಿಕ ನೆಮ್ಮದಿಯೂ ಉಂಟಾಗುತ್ತದೆ. ಹೀಗೆ ವ್ಯಕ್ತಿ ಮತ್ತು ಸಮಾಜ ಎರಡರ ನೆಮ್ಮದಿ ಹಾಗೂ ಶ್ರೆಯೋಭಿವೃದ್ಧಿಯು ನಮ್ಮ ಶುದ್ಧ ನಡೆ–ನುಡಿಯಲ್ಲಿ ಅಡಗಿವೆ ಎಂದರು. ಶರಣತ್ವವು ಜೀವನಕ್ಕೆ ಮೆರಗು ನೀಡುವ ಸಾಧನಾ ಮಾರ್ಗ, ಅದೊಂದು ಪ್ರಾಯೋಗಿಕ ಮಾರ್ಗ, ಧರ್ಮ ಎನ್ನುವುದನ್ನು ನುಡಿದರೆ ಸಾಲದು ಧರ್ಮವು ಆಚರಣೆಯಾಗಬೇಕು ಎಂದು ತಿಳಿಸಿದರು.

ಭಗಿರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಕನಕ ಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ, ಹಂಪಿಯ ಮಾತಂಗಮುನಿ ಮಠದ ಶ್ರೀ ಮಾತಂಗಮುನಿ ಸ್ವಾಮೀಜಿ, ಶ್ರೀ ಮೇದಾರ ಗುರುಪೀಠದ ಕೇತೇಶ್ವರ ಸ್ವಾಮೀಜಿ,ಕೊರಟಗೆರೆಯಶ್ರೀ ಮಹಾಲಿಂಗ ಸ್ವಾಮೀಜಿ, ರಾಣೆಬೆನ್ನೂರಿನ ಶ್ರೀ ಗಜದಂಡ ಸ್ವಾಮಿಜಿ, ಸಿದ್ದಾರೂಢ ಆಶ್ರಮದ ಶ್ರೀ ಜಯದೇವ ಸ್ವಾಮೀಜಿ, ತಿಳುವಳ್ಳಿಯ ಶ್ರೀ ನಿರಂಜನಾಂದ ಸ್ವಾಮೀಜಿ, ಶ್ರೀ ತಿಪ್ಪೇರುದ್ರ ಸ್ವಾಮೀಜಿ, ಸತ್ಯಕ್ಕ ಜಯದೇವಿತಾಯಿ ಶ್ರೀ ಪೂರ್ಣಾನಂದ ಸ್ವಾಮೀಜಿ ಇದ್ದರು.

## ಫಾಸ್ಟ್ ನ್ಯೂಸ್

### ಪ್ರಥಮ ಪಿಯುಸಿ ಪ್ರವೇಶಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಿಜ್ಞಾನ ಪದವಿ ಪೂರ್ವ ವಸತಿ ಕಾಲೇಜುಗಳಿಗೆ 2024-25ನೇ ಸಾಲಿಗೆ ಪ್ರಥಮ ಪಿಯುಸಿ ವಿಜ್ಞಾನ ವಿಭಾಗ (ಪಿಸಿಎಂಬಿ/ಪಿಸಿಎಂಸಿ) ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿರುವ ಶಾಲೆಗಳಲ್ಲಿ ಓದಿರುವ ವಿದ್ಯಾರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಮೇ 13 ರಿಂದ 23 ರವರೆಗೆ ಅರ್ಜಿ ಸ್ವೀಕಾರ ನಡೆಯಲಿದೆ.

**ವಸತಿ ಕಾಲೇಜುಗಳ ವಿಳಾಸ:** ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಚಿತ್ರಹಳ್ಳಿಯ ಮೊರಾರ್ಜಿ ದೇಸಾಯಿ ವಿಜ್ಞಾನ ಪದವಿ ಪೂರ್ವ ವಸತಿ ಕಾಲೇಜು ಹಾಗೂ ಬೊಮ್ಮನಕಟ್ಟೆ ಉನ್ನತಿಕರಿಸಿದ ಮೊರಾರ್ಜಿ ದೇಸಾಯಿ ವಿಜ್ಞಾನ ಪದವಿ ಪೂರ್ವ ಕಾಲೇಜು ಇಲ್ಲಿ ಪ್ರಥಮ ಪಿಯುಸಿ ವಿಜ್ಞಾನ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಅಹ್ವಾನಿಸಲಾಗಿದೆ. ತಮ್ಮ ಹತ್ತಿರದ ವಸತಿ ಶಾಲೆಗಳು ಹಾಗೂ ಕಾಲೇಜುಗಳಲ್ಲಿ ಅರ್ಜಿಗಳ ಲಭ್ಯತೆ ಹಾಗೂ ಅರ್ಜಿ ಸ್ವೀಕಾರ ಮಾಡಲಾಗುವುದು.

**ಅರ್ಜಿ ಸಲ್ಲಿಸಲು ಬೇಕಾಗಿರುವ ದಾಖಲೆಗಳು:** ಎಸ್‌ಎಸ್‌ಎಲ್‌ಸಿ ಪ್ರವೇಶ ಪತ್ರದ ಜೆರಾಕ್ಸ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಜೆರಾಕ್ಸ್, ಆಧಾರ್ ಕಾರ್ಡ್ ಜೆರಾಕ್ಸ್ , ಇತ್ತೀಚಿನ ಎರಡು ಭಾವಚಿತ್ರಗಳು, ದೃಢೀಕೃತ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿಹಾಗೂಇತರೆಅಗತ್ಯದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

**ಕಾಲೇಜುಗಳಲ್ಲಿರುವ ಸೌಲಭ್ಯಗಳು:** ಉಚಿತ ಊಟ, ವಸತಿ, ಪಠ್ಯಪುಸ್ತಕ, ಸಮವಸ್ತ್ರ ಹಾಗೂ ಅನುಭವಿ ಉಪನ್ಯಾಸಕರಿಂದ ಗುಣಮಟ್ಟದ ಶಿಕ್ಷಣ ದೊರೆಯಲಿದ್ದು, ಜಿಲ್ಲೆಯ ಎಲ್ಲಾ ಪೋಷಕರು ಅವಕಾಶದ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ವಸತಿ ಶಾಲೆ, ಕಾಲೇಜು ಹಾಗೂ ಜಿಲ್ಲಾ ಜಂಟಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು.

### ಸರ್ವೋದಯ ಶಾಲೆಗೆ ಶೇ.83% ಫಲಿತಾಂಶ

» **ಪರಶುರಾಂಪುರ**

ಗ್ರಾಮದ ಸರ್ವೋದಯ ಆಂಗ್ಲ ಮಾಧ್ಯಮ ಪ್ರೌಢಶಾಲೆಯು 2023-24 ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ 83% ಫಲಿತಾಂಶ ಪಡೆದುಕೊಂಡಿದೆ. 22 ಪ್ರಥಮ,3ದ್ವಿತೀಯ,1 ತೃತೀಯ ಶ್ರೇಣಿಯಲ್ಲಿ ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ.ಇವರಲ್ಲಿ ಸಹನ ಎಸ್ (527) ಲಿಲಾಕ್ಷಿ(510) ಉತ್ತಮ ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

# ನಾಡಿನ ಹೆಮ್ಮೆಯ ಸಾಂಸ್ಕೃತಿಕ ನಾಯಕ ಬಸವಣ್ಣ

» **ಚಳ್ಳಕೆರೆ**



ಅಸಮಾನತೆ, ಅಸ್ಪೃಶ್ಯತೆಯನ್ನು ದೂರಮಾಡಿ, ಮಹಿಳೆಯರಿಗೆ ವಿಶೇಷ ಮೀಸಲಾತಿ ನೀಡಬೇಕೆಂಬ ದೃಢಸಂಕಲ್ಪವನ್ನು 12ನೇ ಶತಮಾನದಲ್ಲೇ ಬಸವಣ್ಣ ಮಾಡಿದ್ದರು ಎಂದು ಮೈಸೂರಿನ ರಾಮನಹಳ್ಳಿ ಬಸವಧ್ಯಾನ ಮಂದಿರದ ಬಸವಲಿಂಗಮೂರ್ತಿ ಮಹಾಸ್ವಾಮಿ ತಿಳಿಸಿದರು.

ಅವರು, ಶುಕ್ರವಾರ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಚಳ್ಳಕೆರೆ ವೀರಶೈವ ಲಿಂಗಾಯತ ಸಂಘಟನೆಗಳ ಒಕ್ಕೂಟ, ಗ್ರಾಮಾಂತರ ವೀರಶೈವ ಲಿಂಗಾಯತ ಸಂಘ, ಮಹಿಳಾ ಸಂಘ ಹಾಗೂ ನೌಕರರ ಸಂಘ ಹಮ್ಮಿಕೊಂಡಿದ್ದ ನಾಡಿನ ಹೆಮ್ಮೆಯ ಸಾಂಸ್ಕೃತಿಕ ನಾಯಕ ಶ್ರೀಬಸವೇಶ್ವರರ ಜಯಂತೋತ್ಸವ ಕಾರ್ಯಕ್ರಮ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು.

ಇಡೀ ದೇಶದ ಆಡಳಿತವೇ ಜಗಜ್ಯೋತಿ ಬಸಣ್ಣನವರ ಚಿಂತನೆಯನ್ನು ಸಕಾರಗೊಳಿಸುವಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದೆ. ಇತ್ತೀಚೆಗೆ ತಾನೇ ದೇಶದ ಪ್ರಧಾನಮಂತ್ರಿ ನರೇಂದ್ರಮೋದಿ ಸಹ ಬಸವಣ್ಣನವರ ಚಿಂತನೆಗಳ ಬಗ್ಗೆ ಒತ್ತಿ ಹೇಳಿದ್ದಾರೆ.

ಇಂದು ಕೇವಲ ಕರ್ನಾಟಕ, ಭಾರತದಲ್ಲಿಷ್ಟೇಯಲ್ಲ ಇಡೀ ವಿಶ್ವದಲ್ಲೇ ಜಗಜ್ಯೋತಿ ಬಸವೇಶ್ವರರ ಜಯಂತಿ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ವೀರಶೈವ ಸಮಾಜದ ಎಲ್ಲಾ ವರ್ಗಗಳ ವಿಶ್ವಾಸದೊಂದಿಗೆ ಮುನ್ನಡೆಯುತ್ತದೆ. ಇಂದು ಈ ಸಮಾಜದ ಹಲವಾರು ಕ್ಷೇತ್ರಗಳಲ್ಲಿ ಪ್ರಬುದ್ದತೆಯನ್ನು ಕಾಣಬೇಕಿದೆ,

ಸಂಘಟನೆಯನ್ನು ಹೆಚ್ಚು ಬೆಳೆಸಬೇಕಿದೆ, ಇಲ್ಲಿನ ವೀರಶೈವ ಸಂಘಟನೆ ಕಾರ್ಯಗಳು ಸಮಾಜಮುಖಿಯಾಗಿವೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಶ್ರಮದಿಂದ ವೀರಶೈವ ಸಮಾಜದ ನಾಡಿನ ಕಲ್ಯಾಣಕ್ಕಾಗಿ ಶ್ರಮಿಸಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವೀರಶೈವ ಸಮಾಜ ಸೇವಾ ಸಂಘದ ಅಧ್ಯಕ್ಷ, ನಗರದ ಬೆಂಗಳೂರು ರಸ್ತೆಯಲ್ಲಿರುವ ಬಸವೇಶ್ವರ ವೃತ್ತದಲ್ಲಿ ಜಗಜ್ಯೋತಿ ಬಸವೇಶ್ವರರ ಅಶ್ವರೂಢಕಂಚಿನ ಪ್ರತಿಮೆಯನ್ನು ಸುಮಾರು 22 ಲಕ್ಷದಲ್ಲಿ ನಿರ್ಮಿಸಲು ನಿರ್ಧಾರ ಕೈಗೊಂಡಿದ್ದು, ಎಲ್ಲರೂ ಸಹಕರಿಸುವಂತೆ ಮನವಿ ಮಾಡಿದರು. ಜಗಜ್ಯೋತಿ ಬಸವೇಶ್ವರರ ಚಿಂತನೆಗಳು ಮತ್ತು ಹಲವಾರು ಸಮಸ್ಯೆಗಳನ್ನು ಎದುರಿಸಿ ಅವರು ಸಮಾಜದಲ್ಲಿ ಧಾರ್ಮಿಕ ಜಾಗೃತಿಯನ್ನು ಮೂಡಿಸುವಲ್ಲಿ ಯಶಸ್ವಿಯಾದ ಬಗ್ಗೆ ಚಿತ್ರಹಳ್ಳಿಸಹಪ್ರಾಧ್ಯಾಪಕಡಾ.ಎ.ಮೋಹನ್ ಉಪನ್ಯಾಸದಲ್ಲಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಕೆ.ಎಂ.ಜಗದೀಶ್, ಕಾರ್ಯದರ್ಶಿ ಹೊಸಮನೆಸ್ವಾಮಿ, ನೌಕರರ ಸಂಘದ ಅಧ್ಯಕ್ಷ ಸಿ.ಗುರುಮೂರ್ತಿ, ಎಚ್.ಪ್ರಸನ್ನಕುಮಾರ್,ಕೆ.ಎಂ.ನಾಗರಾಜು, ರೇವಣ್ಣ, ಬಿ.ಎಂ.ವಿಜಯೇಂದ್ರ, ಎಚ್.ಎಲ್.ಅಶೋಕ್, ಸಿದ್ದಾರ್ಥ, ಎಸ್.ವಿ.ನಾಗರಾಜು, ಎಚ್.ಪ್ರಕಾಶ್, ಕೆ.ನಾಗೇಶ್, ಕೆ.ಬಿ.ತಿಪ್ಪೇಸ್ವಾಮಿ, ಎಸ್. ಜಯಪ್ರಕಾಶ್, ಸಿ.ಎಂ.ವಿಶುಕುಮಾರ್, ಸಿ.ಸಿದ್ದಾರ್ಥ, ಎಚ್.ಎಲ್.ಅಶೋಕ್, ಕೆ.ಎಂ.ಕೊಟ್ರೇಶ್, ಎ.ವಿಜಯೇಂದ್ರ, ಪಿ.ಜಗದೀಶ್, ಮಾತೃಶ್ರೀಮಂಜುನಾಥ, ಕೆ.ಎಂ.ನಟರಾಜು, ವೃಷಬೇಂದ್ರಪ್ಪ, ಜಿ.ವಿ.ರಾಜಣ್ಣ, ಸಿ.ಎಲ್.ವೀರಣ್ಣ, ಎ.ಮಂಜುನಾಥ, ಎಚ್.ಗಂಗಣ್ಣ, ಇಂಧುಶೇಖರ್, ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ,ನಾಗರಾಜು,ಶಿವಕೀರ್ತಿ, ಡಿ.ಎಂ.ಟಿಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ಫಲಿತಾಂಶ; ತಾಲ್ಲೂಕಿನಾದ್ಯಂತ ಶೇ.75.54 ಸಾಧನೆ ತೃಪ್ತಿಕರ: ನೇತಾಜಿ ಪ್ರಸನ್ನ

» **ಚಳ್ಳಕೆರೆ**

ನಗರದ ಉದಯೋನ್ಮುಖ ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ, ಸಾವಿತ್ರಮ್ಮನವರ ಪುತ್ರಿ ಕೆ.ಟಿ.ಅನುಪಮ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಹಿನ್ನೆಲೆಯಲ್ಲಿ ವಿವಿಧ ಸಂಘಟನೆಗಳಿಂದ ಅವರ ಸ್ವಗೃಹಕ್ಕೆ ತೆರಳಿ ಅಭಿನಂದಿಸಲಾಯಿತು.

ನೇತಾಜಿ ಸ್ನೇಹಬಳಗ ಅಧ್ಯಕ್ಷ ನೇತಾಜಿಪ್ರಸನ್ನ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಈ ವರ್ಷವೂ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಉತ್ತೀರ್ಣರಾಗಿರುವುದು ಸಂತಸದ ವಿಷಯ. ತಾಲ್ಲೂಕಿನಾದ್ಯಂತ ಈ ವರ್ಷ ಶೇ.75.54 ಸಾಧನೆಯಾಗಿರುವುದು ಪ್ರಶಂಸನೀಯ. ಈ ಬಾರಿ ಪರೀಕ್ಷೆ ಗುಣಮಟ್ಟವೂ ಸಹ ಸುಧಾರಿಸಿದೆ ಎನ್ನಲಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಇತ್ತೀಚಿನ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಿ ಬದುಕನ್ನು ರೂಪಿಸಿಕೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಕೆ.ಟಿ.ಅನುಪಮ ಸಾಧನೆ ತೃಪ್ತಿಕರ ಎಂದರು.



ಅಖಿಲ ಭಾರತ ವಿಶ್ವಕರ್ಮ ಪರಿಷತ್ ಅಧ್ಯಕ್ಷ ಆರ್. ಪ್ರಸನ್ನಕುಮಾರ್, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಟಿ.ಜೆ. ತಿಪ್ಪೇಸ್ವಾಮಿ, ಸಿ.ಪಿ. ರಂಗನಾಥ, ಬೊಮ್ಮಣ್ಣ, ಕೆ.ಚಂದ್ರಶೇಖರಚಾರ್, ಶ್ರೀಕಾಂತಚಾರ್, ಬಿ.ಫರೀದ್‌ಖಾನ್, ಮುಂತಾದವರು ಉಪಸ್ಥಿತರಿದ್ದರು.

## ಮಳೆಗಾಗಿ ಪ್ರಾರ್ಥಿಸಿ ವಿಶೇಷ ಪೂಜೆ

**ಹೊಸದುರ್ಗ:** :ತಾಲೂಕಿನ ಐತಿಹಾಸಿಕ ನೀರಗುಂದ ಗ್ರಾಮದ ಶ್ರೀ ಅರಮನೆ ಆಂಜನೇಯಸ್ವಾಮಿಗೆ ಬುಧವಾರ ನಡೆದ ಅಮವಾಸ್ಯೆ ಅಂಗವಾಗಿ ಮಳೆಗಾಗಿ ಪ್ರಾರ್ಥಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಪ್ರತಿವರ್ಷ ಏಪ್ರಿಲ್ ತಿಂಗಳಲ್ಲಿಯೇ ಗ್ರಾಮಕ್ಕೆ ಪೂರ್ವ ಮುಂಗಾರು ಮಳೆ ಬರುತ್ತಿತ್ತು. ಆದರೆ ಈ ಬಾರಿ ಏಪ್ರಿಲ್ ಕಳೆದ ಮೇ ಮೊದಲನೇ ವಾರ ಕಳೆದರೂ ಸ್ವಲ್ಪವೂ ಮಳೆ ಬಂದಿಲ್ಲ. ಇದರಿಂದ ಗ್ರಾಮಸ್ಥರಲ್ಲಿ ಆತಂಕ ಉಂಟಾಯಿತು.



ಇದರಿಂದಾಗಿ ಶ್ರೀ ಮಾರುತಿ ಸೇವಾ ಸಮಿತಿಯವರು ಮಳೆಗಾಗಿ ಭಕ್ತಿಯಿಂದ ಪ್ರಾರ್ಥಿಸಿ ವಿಶೇಷ ಪೂಜಾ ಕಾರ್ಯ ಹಮ್ಮಿಕೊಂಡಿದ್ದರು. ಬೆಳಿಗ್ಗೆ ಬ್ರಾಹ್ಮೀ ಮುಹೂರ್ತದಿಂದಲೇ ಸ್ವಾಮಿಗೆ ಮಹಾಗಣಪತಿ ಪೂಜೆ, ಪುಣ್ಯಹಃ, ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ ಪೂಜೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಕಾರ್ಯಕ್ರಮ ಶ್ರದ್ಧಾಭಕ್ತಿಯಿಂದ ಜರುಗಿದವು. ಶ್ರೀ ಅರಮನೆ ಆಂಜನೇಯಸ್ವಾಮಿಯ ಅಪ್ಪಣೆಯಂತೆ ಸಂಜೆಯ ಹೊತ್ತಿಗೆ ಕಾಕತಾಳೀಯ ಎಂಬಂತೆ ಮಳೆ ಬಂದಿದೆ. ಇದರಿಂದ ಗ್ರಾಮಸ್ಥರಿಗೆ ಸಂತಸ ಉಂಟಾಗಿದ್ದು, ಸ್ವಾಮಿಯ ಮಹಿಮೆ ಬಗ್ಗೆ ಜನರಲ್ಲಿ ಭಕ್ತಿ ಭಾವನೆಯೂ ಹೆಚ್ಚಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.



# ಸಕಾಲಕ್ಕೆ ಪರೀಕ್ಷೆ ಮಾಡಿಸಿ, ತಾಯಿ ಮರಣ ತಗ್ಗಿಸಿ

■ ಜನಾಶಯಪ್ರಭ ಚಿತ್ರದುರ್ಗ



ಕಾಲಕಾಲಕ್ಕೆ ಗರ್ಭಿಣಿಯರು ತಪಾಸಣೆ ಮಾಡಿಸಿ ವೈದ್ಯರಿಂದ ಸೂಕ್ತ ಚಿಕಿತ್ಸೆ ಪಡೆದಲ್ಲಿ ತಾಯಿ ಮರಣ ತಪ್ಪಿಸಬಹುದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿದ ಗರ್ಭಿಣಿ ತಾಯಂದಿರುಗಳಿಗೆ ಮಾಹಿತಿ ಶಿಕ್ಷಣ ನೀಡಿ ಅವರು ಮಾತನಾಡಿದರು.

ಪ್ರತಿ ತಿಂಗಳು 9ನೇ ತಾರೀಖು ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಯುತ್ತಿದ್ದು, ಎಲ್ಲಾ ಗರ್ಭಿಣಿ ತಾಯಂದಿರು ಪರೀಕ್ಷೆಗೆ ಒಳಪಟ್ಟು, ಸೂಕ್ತ ಚಿಕಿತ್ಸೆ ಪಡೆಯಬೇಕು. 1 ಲಕ್ಷ ಜೀವಂತ ಜನನಕ್ಕೆ ರಾಜ್ಯದಲ್ಲಿ ತಾಯಿ ಮರಣ ದರ 70 ಇದೆ. ಚಿತ್ರದುರ್ಗ ಜಿಲ್ಲೆಯಲ್ಲಿ ತಾಯಿ ಮರಣ ದರ 69 ಇದ್ದು, ಯಾವುದೇ ತಾಯಿಯು ಗರ್ಭವತಿ ಎಂಬ ಕಾರಣದಿಂದ ಮರಣ ಹೊಂದಬಾರದು. ತಾಯಿ ಮರಣ ತಗ್ಗಿಸಲು ಗರ್ಭಿಣಿ ಎಂದಾಕ್ಷಣ ಆದಷ್ಟು ಬೇಗ ವೈದ್ಯರಲ್ಲಿ ಪರೀಕ್ಷೆಗೊಳಪಟ್ಟು ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದರು.

ಮಕ್ಕಳತಜ್ಞಹಾಗೂಸಿರಿಗೆರೆಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ತಿಮ್ಮೇಗೌಡ ಮಾತನಾಡಿ, ಸರ್ಕಾರದ ಯೋಜನೆಗಳು ಗ್ರಾಮಾಂತರ ಪ್ರದೇಶದ ಕಟ್ಟ ಕಡೆಯ ತಾಯಿಗೂ ತಲುಪಿಸುವ ನಿಟ್ಟಿನಲ್ಲಿ ಜನನಿ ಸುರಕ್ಷಾ ಯೋಜನೆ, ಜೆಎಸ್‌ಎಸ್‌ಕೆ ಇವು ಸರ್ಕಾರದ ಉಪಯುಕ್ತ ಯೋಜನೆಗಳಾಗಿದ್ದು, ಗರ್ಭಿಣಿ ತಾಯಂದಿರುಗಳು ಪ್ರತಿ ತಿಂಗಳು ಒಂಬತ್ತನೇ ತಾರೀಕು ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷೆಗೊಳಪಟ್ಟು ಇದರ ಪ್ರಯೋಜನ ಪಡೆಯಬೇಕು ಎಂದರು.

ಮಧುಮೇಹ, ರಕ್ತದೊತ್ತಡ, ಅಸ್ತಮಾ, ಹಿಂದಿನ ಹೆರಿಗೆ ಸಿಜರಿನ್ ಆದವರು, ಅವಳಿ ಮಕ್ಕಳ ಹೊಂದಿದವರು, ಇಂಥವರಿಗೆ ಪ್ರತಿ ತಿಂಗಳು 24 ನೇ ತಾರೀಖಿನಂದು ವಿಶೇಷ ಗರ್ಭಿಣಿಯರ ತಪಾಸಣೆ ಮತ್ತು ಸೂಕ್ತ ಚಿಕಿತ್ಸೆ ಉಚಿತವಾಗಿ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುವುದು. ರಕ್ತ ಹೀನತೆ ತಡೆಯಲು ಕಬ್ಬಿನಾಂಶಗಳ ಮಾತ್ರೆ ಇತರೆ ಸೇವಾ ಸೌಲಭ್ಯಗಳನ್ನು ಪಡೆದು ತಾಯಂದಿರು ಆರೋಗ್ಯವಂತ ಮಗುವನ್ನು ಹೆತ್ತು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ.ಪವಿತ್ರ ಮಾತನಾಡಿ, ಕೇಂದ್ರ ಸ್ಥಾನದಲ್ಲಿ ಇರುವ ನಾವು ನಿಮ್ಮೊಂದಿಗಿದ್ದೇವೆ, ತಮ್ಮ ಗ್ರಾಮಗಳ ಸಮೀಪವೇ ಹೆರಿಗೆ ಸೇವಾ ಸೌಲಭ್ಯ ಇರುವುದು ತಮಗೆಲ್ಲಾ ಸಂತೋಷದ ವಿಷಯ. ಗ್ರಾಮಾಂತರ ಪ್ರದೇಶದಲ್ಲಿ ಹೆರಿಗೆ ಮಾಡಿಸಿ ಜಿಲ್ಲಾ ಆಸ್ಪತ್ರೆಯಲ್ಲಿ ಹೊರೆತಗ್ಗಿಸಿ ತುರ್ತು ಸಂದರ್ಭದಲ್ಲಿ ಉನ್ನತ ಮಟ್ಟದ ಆಸ್ಪತ್ರೆಗೆ ಕಳುಹಿಸಲು ಆಂಬುಲೆನ್ಸ್ ವ್ಯವಸ್ಥೆ ಇರುವುದರಿಂದ ಯಾರೂ ಭಯಭೀತರಾಗದೆ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ದಿನದ 24 ಗಂಟೆಯೂ ಕೂಡ ಹೆರಿಗೆ ಸೌಲಭ್ಯ ಇರುವ ಪ್ರಯುಕ್ತ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ತೊಡಕಿನ ಗರ್ಭಿಣಿಯರು ಆಸ್ಪತ್ರೆಯಲ್ಲಿ ಮೂರು ಬಾರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮದಲ್ಲಿ ಪರೀಕ್ಷೆ ಒಳಪಟ್ಟರೆ ಒಟ್ಟು 300 ರೂಗಳನ್ನು ಫಲಾನುಭವಿಯ ಬ್ಯಾಂಕ್ ಖಾತೆಗೆ ಸೇವಾ ಸಿಂಧು ಪೋರ್ಟಲ್ ನಿಂದ ಅರ್ಜಿ ಸಲ್ಲಿಸಿದವರಿಗೆ ಜಮಾ ಮಾಡಲಾಗುವುದು. 18 ವರ್ಷದ ಒಳಗಡೆ ಇಳಿ ವಯಸ್ಸಿನಲ್ಲಿ ಹೆಣ್ಣು ಮಕ್ಕಳಿಗೆ ಮದುವೆ ಮಾಡಿ ಅಪಾಯ ತಂದುಕೊಳ್ಳಬೇಡಿ ಅಂತರದ ಹೆರಿಗೆ ಕುಟುಂಬ ಯೋಜನೆ, ಚಿಕ್ಕ ಕುಟುಂಬದ ಆದರ್ಶ ಪಾಲಿಸಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಗರ್ಭಿಣಿ ತಾಯಂದಿರು ಆಸ್ಪತ್ರೆಯಲ್ಲಿ ವೈದ್ಯರಲ್ಲಿ ಪರೀಕ್ಷೆ ಮಾಡಿಸಿದ ದಾಖಲೆಗಳನ್ನು ಒಂದೆಡೆ ಜೋಪಾನವಾಗಿ ಇಟ್ಟುಕೊಂಡು ಪ್ರತಿದಿನ ಮಧ್ಯಾಹ್ನ ಎರಡು ತಾಸು ಎಡ ಮೊಗ್ಗುಲಲ್ಲಿ ಮಲಗುವುದರ ಮುಖಾಂತರ ಗರ್ಭದಲ್ಲಿ ಬೆಳೆಯುವ ಮಗುವಿಗೂ ಕೂಡ ವಿರಾಮ ಸಿಗುವಂತೆ ಅವಕಾಶ ಮಾಡಿಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಹಿರಿಯ ವೈದ್ಯರಾದ ತುಳಸಿ ರಂಗನಾಥ್, ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್, ಶುಶ್ರೂಷತಾಧಿಕಾರಿ ತಾರಾ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಪರ್ವೀನ್, ಸುಶೀಲ, ಆಶಾ ಕಾರ್ಯಕರ್ತೆಯರು, 30ಕ್ಕೂ ಹೆಚ್ಚು ಗರ್ಭಿಣಿ ತಾಯಂದಿರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಎಂ.ಪಿ ಪ್ರಕಾಶ್ ಪ್ರೌಢಶಾಲೆಗೆ ಶೇ.96.29 ರಷ್ಟು ಫಲಿತಾಂಶ

» ಹೊಸದುರ್ಗ







2023–24 ನೇ ಸಾಲಿನಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶದಲ್ಲಿ ಪಟ್ಟಣದ ಎಸ್.ನಿಜಲಿಂಗಪ್ಪ ಸಮೋಹ ಸಂಸ್ಥೆಗೆ ಸೇರಿದ ಎಂ.ಪಿ.ಪ್ರಕಾಶ್ ಪ್ರೌಢಶಾಲೆಗೆ ಶೇ.96.29 ರಷ್ಟು ಫಲಿತಾಂಶ ಲಭಿಸಿದ್ದು ಅತ್ಯುನ್ನತಶ್ರೇಣಿ 38, ಪ್ರಥಮಶ್ರೇಣಿ 55, ದ್ವಿತೀಯಶ್ರೇಣಿ 07, ಹಾಗೂ ಉತ್ತೀರ್ಣ 4 ವಿದ್ಯಾರ್ಥಿಗಳು ತರ್ಗಡೆ ಹೋಂದಿದ್ದು ಸಯ್ಯದಾರುಝಹರ 614, (ಶೇ 98.2), ತನುಶ್ರೀಪ್ರಸಾದ್ 608 (ಶೇ.97.3), ಕೃಪಾದೇವಿ ಎಂ.ವಿ, 596 (ಶೇ.95.4), ತರುಣ್‌ಕುಮಾರ್ ಜಿ.ಪಿ 595 (ಶೇ.95.2), ಸುಮನ್ ಹೆಚ್. ಹೂವನೂರು 593 (ಶೇ.94.9) ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ಹೆಚ್ಚು ಅಂಕಗಳನ್ನು ಗಳಿಗೆ ಶಾಲೆಗೆ ಕೀರ್ತಿ ತಂದಿರುವ ವಿದ್ಯಾರ್ಥಿಗಳಿಗೆ ಸಂಸ್ಥೆಯ ಕಾರ್ಯದರ್ಶಿ ಕೆ.ಎಸ್. ಕಲ್ಮಠ್,ಅಕಾಡಮಿ ಡೈರಕ್ಟರ್ ಎಂ.ಬಿ.ತಿಪ್ಪೇಸ್ವಾಮಿ ಹಾಗೂ ಆಡಳಿತ ಮಂಡಳಿಯ ಸದಸ್ಯರುಗಳು ಮತ್ತು ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ವಿ.ಕ್ಷಿತಿಜಾಗೆ 95.20%

» ಚಳ್ಳಕೆರೆ



ಇಲ್ಲಿನ ವಾಸವಿ ಪ್ರೌಢಶಾಲೆಯ ವಿದ್ಯಾರ್ಥಿನಿ ವಿ.ಕ್ಷಿತಿಜಾ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್‌ನಲ್ಲಿ ಉತ್ತೀರ್ಣರಾಗಿದ್ದು, ಇವರ ಸಾಧನೆಗೆ ಮೆಚ್ಚುಗೆ ವ್ಯಕ್ತವಾಗಿದೆ. ಆರಕ್ಷಕ ಇಲಾಖೆಯ ಮುಖ್ಯಪೇದೆ ಎನ್.ವಸಂತಕುಮಾರ್, ರೇಖಾರವರ ಪುತ್ರಿ ಕ್ಷಿತಿಜಾ 625 ಅಂಕಗಳಿಗೆ 595 ಅಂಕಗಳನ್ನು ಪಡೆದು ಶೇ.95.20 ಸಾಧನೆ ಮಾಡಿದ್ದಾಳೆ.

### ಎಸ್.ಎಸ್.ಎಲ್.ಸಿ ಫಲಿತಾಂಶ ಶೇ.70.38

» ಹೊಸದುರ್ಗ

ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತಾಲ್ಲೂಕಿನಾದ್ಯಂತ ಒಟ್ಟು 3049 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು, ಅದರಲ್ಲಿ 2146 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಒಟ್ಟು ಶೇ.70.38 ರಷ್ಟು ಫಲಿತಾಂಶ ಪಡೆದಿದೆ ಎಂದು ಬಿಇಒ ಸೈಯದ್ ಮೋಸಿನ್ ತಿಳಿಸಿದ್ದಾರೆ." ಎಂ.ಪಿ ಪ್ರಕಾಶ್ ಪ್ರೌಢಶಾಲೆಯ ಸೈಯದ್ ಝುಹಾರ 614 ಅಂಕಗಳಿಸಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಎಂ.ಪಿ ಪ್ರಕಾಶ್ ಪ್ರೌಢಶಾಲೆಯ ತನುಶ್ರೀ ಪ್ರಸನ್ನ – 608, ಬಾಗೂರಿನ ವಿದ್ಯಾವಾಹಿನಿ ವಿದ್ಯಾನಿಕೇತನ ಪ್ರೌಢಶಾಲೆ ನೇಸರ ಎಂ – 605 ಅಂಕಗಳಿಸಿ ಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ. ನೀರಗುಂದದ ಕಿತ್ತೂರು ರಾಣಿ ಚೆನ್ನಮ್ಮ ವಸತಿಯುತ ಶಾಲೆ, ಮಾಡದಕೆರೆ ಇಂದಿರಾಗಾಂಧಿ ವಸತಿಯುತ ಶಾಲೆ, ರಂಗಾಪುರದ ಸ್ವಾಮಿ ವಿವೇಕಾನಂದ ಪ್ರೌಢಶಾಲೆ, ಬಾಗೂರಿನ ವಿದ್ಯಾವಾಹಿನಿ ವಿದ್ಯಾನಿಕೇತನ ಪ್ರೌಢಶಾಲೆ, ಹೊಸದುರ್ಗದ ತೋಟದರಾಮಯ್ಯ ಪ್ರೌಢಶಾಲೆ, ಶ್ರೀರಾಂಪುರದ ವಿದ್ಯಾಪ್ರಕಾಶ್ ಪ್ರೌಢಶಾಲೆಗಳು ಶೇ.100 ರಷ್ಟು ಫಲಿತಾಂಶ ಪಡೆದಿವೆ. 44 ವಿದ್ಯಾರ್ಥಿಗಳು ಕನ್ನಡದಲ್ಲಿ 125 ಕ್ಕೆ 125 ಅಂಕಗಳಿಸಿದ್ದಾರೆ ಎಂದು ತಿಳಿಸಿದರು.

### ಬೈಕ್ ಅಪಘಾತ ಮಹಿಳೆ ಸಾವು

» ಹೊಸದುರ್ಗ

ತನ್ನ ತಾಯಿಯನ್ನು ಬೈಕಿನಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೊಗುತ್ತಿದ್ದ ಸಂಧರ್ಬದಲ್ಲಿ ಬೈಕ್ ಆಯಾ ತಪ್ಪಿ ಬಿದ್ದ ಪರಿಣಾಮ ಮಹಿಳೆಯೋರ್ವರು ಸಾವನ್ನಪ್ಪಿರುವ ಘಟನೆ ಗುರುವಾರ ತಾಲೂಕಿನ ಎಂ.ಮಲ್ಲಾಪುರ ಗ್ರಾಮದ ಸಮೀಪ ಸಂಭವಿಸಿದೆ. ಮೃತ ಮಹಿಳೆಯನ್ನು ತಾಲೂಕಿನ ಎಂ.ಮಲ್ಲಾಪುರ ಗ್ರಾಮದ ಭೈರಪ್ಪನ ಪತ್ನಿ ಕರಿಯಮ್ಮ (65) ಎಂದು ತಿಳಿದು ಬಂದಿದ್ದು ಬುಧವಾರ ಕರಿಯಮ್ಮನ ಮಗ ಜೋಗೇಶ್ ಎಂಬುವವರು ತನ್ನ ತಾಯಿಯನ್ನ ಆಸ್ಪತ್ರೆಗೆ ತೋರಿಸುವ ಸಲುವಾಗಿ ಹೋಗುತ್ತಿದ್ದ ಸಂಧರ್ಬದಲ್ಲಿ ಗ್ರಾಮದ ಹೊರವಲಯದಲ್ಲಿರುವ ಚಂದ್ರಪ್ಪ ಎಂಬುವವರ ತೋಟದ ಟಾರ್ ರಸ್ತೆಯಲ್ಲಿ ಬೈಕ್ ಸ್ಕಿಡ್ ಆದ ಪರಿಣಾಮ ಹಿಂಬದಿಯಲ್ಲಿ ಕುಳಿತಿದ್ದ ಕರಿಯಮ್ಮ ಟಾರ್ ರಸ್ತೆಯ ನೆಲಕ್ಕೆ ಬಿದ್ದ ಪರಿಣಾಮ ತಲೆಗೆ ಪೆಟ್ಟಾಗಿ ರಕ್ತ ಶ್ರಾವವಾಗಿದ್ದು ಚಿಕಿತ್ಸೆ ಫಲಕಾರಿಯಾಗದೆ ಕರಿಯಮ್ಮ ಗುರುವಾರ ಬೆಳಗಿನ ಜಾವ ಸಾವನ್ನಪ್ಪಿದ್ದಾರೆ.

# ಸಂಸತ್ತಿಗೆ ಅನುಭವ ಮಂಟಪವೇ ಬುನಾದಿ

» ಚಿತ್ರದುರ್ಗ



ಪ್ರಸ್ತುತರಾಜಕೀಯಕಾರಣಕ್ಕಾಗಿಜಾತಿ, ಧರ್ಮಗಳ ಮಧ್ಯೆ ವಿಷ ಬೀಜ ಬಿತ್ತುವ, ದ್ವೇಷದ, ಸುಳ್ಳು ಭಾಷಣಗಳ ಪ್ರಭಾವಕ್ಕೆ ಸಂಪೂರ್ಣ ಕಡಿವಾಣ ಹಾಕಲು ಬಸವ ತತ್ತ್ವವೇ ಬ್ರಹ್ಮಾಸ್ತ್ರ ಆಗಿದೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು.

ಸೀಬಾರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಬಸವ ಜಯಂತ್ಯುತ್ಸವದಲ್ಲಿ ಬಸವಣ್ಣನ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, 12ನೇ ಶತಮಾನದಲ್ಲಿಯೇ ಮುಂದಿನ ದಿನಗಳಲ್ಲಿ ನಾಡು ಎದುರಿಸುವ ಸಮಸ್ಯೆಗಳಿಗೆ ವಚನಗಳ ಮೂಲಕ ಸಂದೇಶ ನೀಡಿದ ಬಸವಣ್ಣ, ಈಗಿನ ಸಂಸತ್ತು ಸ್ಥಾಪನೆಗೆ ಅವರಅನುಭವ ಮಂಟಪವೇ ಬುನಾದಿ ಆಗಿದೆ ಎಂದರು.

ನೊಂದ ಜನರ ಕಣ್ಣೀರು ಹೊರೆಸಿದ ಬಸವಣ್ಣ, ಅಸ್ಪೃಶ್ಯತೆ, ಮೌಢ್ಯಾಚರಣೆ, ಅಸಮಾನತೆ ವಿರುದ್ಧ ಹೋರಾಟ ನಡೆಸಿದ ಫಲ ಇಂದು ಎಲ್ಲ ವರ್ಗದಜನ ವಿವಿಧ ಕ್ಷೇತ್ರದಲ್ಲಿ ಸ್ಥಾನಮಾನ ಪಡೆದು, ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ ಎಂದು ಹೇಳಿದರು.

ಬಸವ ಚಿಂತನೆಗಳು ಪ್ರಸ್ತುತ ಸಮಾಜಕ್ಕೆ ತುರ್ತು ಚಿಕಿತ್ಸೆ ರೀತಿ ಅಗತ್ಯವಿದ್ದು, ಅದರ ಪಾಲನೆ ನಮ್ಮೆಲ್ಲರ ಹೊಣೆ ಆಗಿದೆ. ಬಸವಾದಿ ಶರಣರ ತತ್ತ್ವಗಳು ಸದಾ ಪ್ರಸ್ತುತವಾಗಿದ್ದು, ಅವುಗಳನ್ನು ಪಾಲನೆ ಮಾಡಿದರೆ ಸಮಸಮಾಜ ನಿರ್ಮಾಣದ ಹಾದಿ ಸುಲಭವಾಗಲಿದೆ ಎಂದರು.

ಬಸವ ಅನುಯಾಯಿಗಳು ಎಂದು ಹೇಳಿಕೊಂಡು ವರ್ಷಕ್ಕೊಮ್ಮೆ ಜಯಂತಿ ಆಚರಣೆ ಮಾಡುವ ನಾವುಗಳು ಕಾಯಕತತ್ತ್ವ ಮರೆತಿದ್ದೇವೆ. ಜನಸೇವೆ, ನೊಂದ ಜನರಿಗೆ ಸ್ಪಂದಿಸುವ ಮೂಲಕ ದೇವರನ್ನು ಕಾಣುವುದನ್ನೇ ಮರೆತಿದ್ದೇವೆ. ದ್ವೇಷದ ಮಾತುಗಳಿಗೆ ಕಿವಿಕೊಟ್ಟು ಮನಸ್ಸನ್ನು ಕಲುಷಿತಗೊಳಿಸಿಕೊಳ್ಳುತ್ತಿದ್ದೇವೆ ಎಂದು ಬೇಸರಿಸಿದರು.

ಹಳ್ಳಿಗಳಲ್ಲಿ ಕೋಟ್ಯಂತರರೂಪಾಯಿ ವೆಚ್ಚದಲ್ಲಿ ಮಸೀದಿ, ಮಂದಿರ, ಚರ್ಚ್ ನಿರ್ಮಿಸುವ ನಾವು, ನಮ್ಮದೇ ಊರಿನ, ನಮ್ಮ ಮನೆಯ ಮುಗ್ಧ ಮಕ್ಕಳ ಶಿಕ್ಷಣಕ್ಕೆ ಶಾಲೆ, ನೊಂದ ಜನರಿಗೆ ಆಶ್ರಯ ಕಲ್ಪಿಸುವಲ್ಲಿ ನಿರ್ಲಕ್ಷ್ಯ ವಹಿಸಿದ್ದೇವೆ. ಈ ನಿಟ್ಟಿನಲ್ಲಿ ಬಸವ ಅನುಯಾಯಿಗಳಾದ ನಾವು ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ ಎಂದರು.

ನನ್ನ ದೇಹವೇ ದೇಗುಲ ಎಂಬ ವಚನದ ಸಾರ ಅರಿತು ಜನಸೇವೆಯಲ್ಲಿ ದೇವರನ್ನು ಕಾಣುವ ಗುಣ ಬೆಳೆಸಿಕೊಳ್ಳಬೇಕಿದೆ. ನಾನು ಕೂಡಗುಡಿ–ಗುಂಡಾರ ಸುತ್ತದೇ ನನ್ನ ಬಳಿ ಬರುವಜನರ ಸಂಕಷ್ಟಕ್ಕೆ ಸ್ಪಂದಿಸುವ ಮೂಲಕ ದೇವರನ್ನು ಕಾಣುತ್ತಿರುವೆ ಎಂದು ಹೇಳಿದರು.

ಬಸವಣ್ಣನ ಚಿಂತನೆಯ ಪರಿಕಲ್ಪನೆಯೇ ಗ್ಯಾರಂಟಿ ಯೋಜನೆ: ಸಮ ಸಮಾಜ ನಿರ್ಮಾಣ, ನೊಂದಜನರ ಸಂಕಷ್ಟಕ್ಕೆ ಸ್ಪಂದಿಸುವ ಮೂಲ ಉದ್ದೇಶವೇ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿ ಯೋಜನೆ ಜಾರಿ ಮಾಡಿರುವುದು. ಇದು ಬಸವತತ್ವದ ಪರಿಕಲ್ಪನೆಯೇ ಆಗಿದೆ ಎಂದರು.ಈ ಐದು ಯೋಜನೆಗಳು ಮಹಿಳೆ, ಯುವ ಪೀಳಿಗೆ, ಬಡಜನರನ್ನು ಮುಖ್ಯವಾಹಿನಿಗೆ ತರುವಗುರಿ ಹೊಂದಲಾಗಿದೆ. ಈ ಯೋಜನೆಗಳನ್ನು ಟೀಕಿಸುವವರು ಬಸವಣ್ಣನ ಚಿಂತನೆಯ ವಿರೋಧಿಗಳು ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಬಸವಣ್ಣನ ಆಶಯದಂತೆ ಆಡಳಿತ ನಡೆಸುತ್ತಿದೆ. ಬಸವಣ್ಣನನ್ನು ಸಾಂಸ್ಕೃತಿಕ ನಾಯಕನೆಂದು ಘೋಷಿಸುವ ಮೂಲಕ ತನ್ನ ಬದ್ಧತೆ ಪ್ರದರ್ಶಿಸಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶಮೂರ್ತಿ, ಅಂಬೇಡ್ಕರ್ ವಿದ್ಯಾರ್ಥಿ ಪರಿಷತ್ತಿನ ಅಧ್ಯಕ್ಷ ಬಿ.ಪಿ.ತಿಪ್ಪೇಸ್ವಾಮಿ, ಕಾಂಗ್ರೆಸ್ ಎಸ್ಸಿ ಘಟಕದ ತಾಲೂಕು ಅಧ್ಯಕ್ಷ ಅನಿಲ್ ಕೋಟಿ, ಮುಖಂಡರಾದ ಎಲ್.ಐ.ಸಿ ಈರಣ್ಣಯ್ಯ, ರವಿ ಬಿ.ಜಿ.ಹಳ್ಳಿ ಉಪಸ್ಥಿತರಿದ್ದರು.

## ವೀರಶೈವ ಸಮಾಜದಿಂದ ಜರುಗಿದ ಬಸವಜಯಂತಿ ಮೆರವಣಿಗೆ



» ಚಿತ್ರದುರ್ಗ

ಹನ್ನೆರಡನೆ ಶತಮಾನದ ಭಕ್ತಿ ಭಂಡಾರಿ, ಕ್ರಾಂತಿಕಾರಿ, ಮಹಾನ್ ಮಾನವತಾವಾದಿ ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ವೀರಶೈವ ಸಮಾಜದಿಂದ ಶುಕ್ರವಾರ ವಿಜೃಂಭಣೆಯಿಂದ ಆಚರಿಸಲಾಯಿತು.

ಸಾರೋಟಿನಲ್ಲಿ ಬಸವೇಶ್ವರರ ಬೃಹತ್ ಭಾವಚಿತ್ರದೊಂದಿಗೆ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಹೊರಟಿತು.

ಸೋಮನ ಕುಣಿತ, ಗೊಂಬೆ ಕುಣಿತ, ವೀರಗಾಸೆ, ಕೀಲುಕುದುರೆ, ಉರುಮೆ, ತಮಟೆ, ಡೊಳ್ಳು ಮೆರವಣಿಗೆಯಲ್ಲಿ ಆಕರ್ಷಣೆಯಾಗಿತ್ತು.

ಗಾಂಧಿ ವೃತ್ತದ ಮೂಲಕ ಆನೆಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಅಂಬೇಡ್ಕರ್ ಸರ್ಕಲ್ ಮಾರ್ಗವಾಗಿ ಸಾಗಿದ ಮೆರವಣಿಗೆ ಗಾಂಧಿ ವೃತ್ತಕ್ಕೆ ಹಿಂದಿರುಗಿತು.ಮುರುಘಾಮಠದ ಉಸ್ತುವಾರಿ ಬಸವಪ್ರಭು ಸ್ವಾಮೀಜಿ, ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ, ಗಾಣಿಗ ಮಠದ ಬಸವ ಕುಮಾರ ಸ್ವಾಮೀಜಿ ವೀರಶೈವ ಸಮಾಜದ ಅಧ್ಯಕ್ಷ ಎಸ್.ಎಂ.ಎಲ್.ತಿಪ್ಪೇಸ್ವಾಮಿ, ಉಪಾಧ್ಯಕ್ಷ ರಾಜು, ಸಹ ಕಾರ್ಯದರ್ಶಿ ಜಿತೇಂದ್ರ, ಖಜಾಂಚಿ ತಿಪ್ಪೇಸ್ವಾಮಿ, ನಿರ್ದೇಶಕ ಸಿದ್ದವ್ವನಹಳ್ಳಿ

ಎಸ್.ಪರಮೇಶ್, ಕೆ.ಇ.ಬಿ.ಷಣ್ಮುಖಪ್ಪ, ಎಸ್.ವಿ.ಕೊಟ್ರೇಶ್, ಟಿ.ಸುರೇಶ್, ಎಸ್.ಜೆ.ಎಂ.ಕಾನೂನು ಕಾಲೇಜು ಪ್ರಾಂಶುಪಾಲರಾದ ಎಸ್.ದಿನೇಶ್, ಎಸ್.ವೀರೇಶ್, ಟಿ.ಎಸ್.ಮುರುಗನ್, ಜಿ.ಎನ್. ಮಲ್ಲಿಕಾರ್ಜುನಪ್ಪ, ವೀರಶೈವ ಲಿಂಗಾಯಿತ ಯುವ ವೇದಿಕೆ ಜಿಲ್ಲಾಧ್ಯಕ್ಷ ಹೆಚ್.ಎಂ.ಮಂಜುನಾಥ್, ಬಿ.ವಿ.ಕಾರ್ತಿಕ್, ಗಿರೀಶ್, ಮೋಕ್ಷ ರುದ್ರಸ್ವಾಮಿ, ರುದ್ರಾಣಿ ಗಂದಾಧರ್, ರೀನ ವೀರಭದ್ರಪ್ಪ, ಉಮಾ ಬಸವರಾಜ್, ನಿರ್ಮಲ ಬಸವರಾಜ್, ಮಹಾಂತಮ್ಮ ಇನ್ನು ಅನೇಕರು ಬಸವ ಜಯಂತಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.ಕೆಡಿಪಿ.ಸದಸ್ಯ ಕೆ.ಸಿ.ನಾಗರಾಜ್‌ರವರಿಗೆ ಗಾಂಧಿವೃತ್ತದಲ್ಲಿ ಬೃಹಧಾಕಾರವಾದ ಸೇಬು ಹಾಗೂ ಮೋಸಂಬಿ ಹಾರ ಹಾಕಲಾಯಿತು.

## ಅಂತರಘಟ್ಟಮ್ಮ ಕಟ್ಟೆ ಮೇಲಿದ್ದ ಭಾರಿ ಗಾತ್ರದ ಬೇವಿನ ಮರ ಬುಡ ಸಮೇತ ನೆಲಕ್ಕುರುಳಿರುವುದು



» ಚಿತ್ರದುರ್ಗ

ಕಬೀರಾನಂದಾಶ್ರಮ ಹಿಂಭಾಗ ಕಾಳಮ್ಮ ಬೀದಿಯಲ್ಲಿರುವ ಅಂತರಘಟ್ಟಮ್ಮ ಕಟ್ಟೆ ಮೇಲಿದ್ದ ಮುನ್ನೂರಕ್ಕೂ ಹೆಚ್ಚು ವರ್ಷಗಳ ಹಳೆಯ ಬೇವಿನ ಮರ ಶುಕ್ರವಾರ ಸಂಜೆ 4–20 ಕ್ಕೆ ಉರುಳಿ ಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿಯಾಗಿಲ್ಲ. ಹಾಳು ಬಿದ್ದಿರುವ ಮನೆಯ ಮೇಲೆ ಬೇರು ಸಮೇತ ಮರ ಮುರಿದು ಬಿದ್ದ ಸದ್ದಿಗೆ ಅಕ್ಕಪಕ್ಕದ ನಿವಾಸಿಗಳು ಭಯ ಭೀತರಾಗಿ ಮನೆಯಿಂದ ಹೊರಗೆ ಓಡಿ ಬಂದು ಮರ ಬಿದ್ದಿರುವುದನ್ನು ಕಂಡು ಹೌಹಾರಿದರು.

**ಪ್ರಮುಖ ಸುದ್ದಿ**

# ಕೋಡಿ ಬಸವೇಶ್ವರ ರಥೋತ್ಸವ

» ಪರಶುರಾಂಪುರ




ಸಮೀಪದ ಟಿ.ಎನ್.ಕೋಟೆಯಲ್ಲಿ ಶುಕ್ರವಾರ ಪ್ರತಿ ವರ್ಷದಂತೆ ಈ ವರ್ಷವು ಬಸವ ಜಯಂತಿಯಂದು ಕೋಡಿ ಬಸವೇಶ್ವರ ಸ್ವಾಮಿಯ ರಥೋತ್ಸವ ಶ್ರದ್ಧಾ, ಭಕ್ತಿಯಿಂದ ವಿಜೃಂಭಣೆಯಿಂದ ನೆರವೇರಿತು.

ಸ್ವಾಮಿಗೆ ಬೆಳಿಗ್ಗೆ ಕುಂಭಾಭಿಷೇಕ ಮತ್ತು ಕಳಸ ಪ್ರತಿಷ್ಠಾಪನೆ ಜತೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿಸಲಾಯಿತು.

ಒಪ್ಪತ್ತಿನಿಂದ ಭಕ್ತರು ರಥಕ್ಕೆ ಅಲಂಕರಿಸಿ ಬಸವೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿ ಪ್ರತಿಷ್ಠಾಪಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ರಥವನ್ನು ಎಳೆಯಲಾಯಿತು.ಈ ವೇಳೆಯಲ್ಲಿ ಜಾನಪದ ಕಲಾ ತಂಡಗಳ ಜತೆ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆಯಲ್ಲಿ ನೆರೆದಿದ್ದ ಭಕ್ತರು ಭಕ್ತಿಯಿಂದ ಹಣ್ಣು ಹೂವುಗಳನ್ನು ದೇವರಿಗೆ ಅರ್ಪಿಸುವ ಜತೆ ರಥದ ಗಾಲಿಗೆ ತೆಂಗಿನ ಕಾಯಿ ಒಡೆದು ಬಳಿಕ ಸೂರುಬೆಲ್ಲ, ಮಂಡಕ್ಕಿ, ಬಾಳೆಹಣ್ಣನ್ನು ರಥಕ್ಕೆ ಎಸೆಯುವ ಮೂಲಕ ಸ್ವಾಮಿ ಕೃಪೆಗೆ ಪಾತ್ರರಾದರು.ಸಂದರ್ಭದಲ್ಲಿ ಶಾಸಕ ಟಿ.ರಘುಮೂರ್ತಿ ಭೇಟಿ ನೀಡಿ ದೇವರ ಪೂಜಾ ಕೈಂಕರ್ಯಗಳಲ್ಲಿ ಭಾಗವಹಿಸಿದ್ದರು.ಜಿಪಂ ಮಾಜಿ ಸದಸ್ಯ ಮುತ್ತುರಾಜ, ಸ್ಥಳೀಯ ಗ್ರಾಪಂ ಸದಸ್ಯರು,ಹಿರಿಯರು,ಮುಖಂಡರು ಗ್ರಾಮಸ್ಥರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

## ಶುದ್ಧ ಕುಡಿವ ನೀರಿನ ಘಟಕಕ್ಕೆ ಕುಟೇವು ನಿವಾಸಿಗಳ ಮನವಿ



» ಪರಶುರಾಂಪುರ

ಹೋಬಳಿ ವ್ಯಾಪ್ತಿಯ ಬೋಮ್ಮನಕುಂಟೆ ಗ್ರಾಮದ ಮುಜರೆ ಕುಟೇವು ಹಟ್ಟಿಗೆ ನೂತನ ಶುದ್ಧ ನೀರಿನ ಘಟಕ ಸ್ಥಾಪನೆಗೆ ಇಲ್ಲಿನ ನಿವಾಸಿಗಳು ಮನವಿ ಮಾಡಿದ್ದಾರೆ.ಪಗಡಲಬಂಡೆ ಗ್ರಾಪಂ ವ್ಯಾಪ್ತಿಯ ಬರುವ ವೇದಾವತಿ ತಟದಲ್ಲಿ ಬರುವ ಕುಟೇವು ಸುಮಾರು 20 ಮನೆಗಳಿದ್ದು,ಐವತ್ತಕ್ಕೂ ಹೆಚ್ಚು ಮತದಾರರು ವಾಸವಾಗಿದ್ದಾರೆ.ಫಿಲ್ಟರ್ ನೀರಿಗಾಗಿ ಸುಮಾರು ಒಂದುವರೆ ಕಿಲೋ ಮೀಟರ್ ಬೋಮ್ಮನಕುಂಟೆ ಗ್ರಾಮದಿಂದ ತರುವ ಪರಿಸ್ಥಿತಿಯಲ್ಲಿದ್ದಾರೆ.

ಇಲ್ಲಿನ ಮಹಿಳೆಯರು,ಮಕ್ಕಳು ಪ್ರತಿ ದಿನ ಎರಡ್ಮೂರು ಬಿಂದಿಗೆಗಳನ್ನ ತೆಗೆದುಕೊಂಡು ಫಿಲ್ಟರ್ ನೀರನ್ನ ತರುವ ಪರಿಸ್ಥಿತಿ ಬಂದು ಒದಗಿದೆ.ತೊರೆ ತಟದ ಬೋರ್ ನೀರಿನ್ನ ಈ ಮೊದ್ಲು ತಂದು ಕುಡಿಯುತ್ತಿದ್ದೆವು.ಈಗ ಜಮೀನುರು ಬೆಳೆ ಕಟಾವು ಆದ ಬಳಿಕ ಬೋರ್ವೆಲ್ ಚಾಲು ಮಾಡುತ್ತಿಲ್ಲ ಈ ಸಮಸ್ಯೆಯಿಂದ ನಮಗೊಂದು ಫಿಲ್ಟರ್ ಹಾಕಿದರೇ ನಾವು ಕುಡಿಯಲು ಅನುಕೂಲ ಎಂದು ಇಲ್ಲಿನ ಮಹಿಳೆಯರ ಅಭಿಮತ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T